# ಜನತಾ ವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ಸಂಪಾದಕರು : ಎಂ.ಎಸ್. ವಿಕಾಸ್

ದಾವಣಗೆರೆ ಬುಧವಾರ, ಡಿಸೆಂಬರ್ 11, 2024

ಸಂಪುಟ : 51 ಸಂಚಿಕೆ : 208 ☎ 08192-254736 91642 99999 RNI No: 27369 ಪುಟ : 6 ರೂ : 5.00 www.janathavani.com janathavani@mac.com




## ಸಂಘರ್ಷಕ್ಕೆ ತಿರುಗಿದ ಪಂಚಮಸಾಲಿ ಹೋರಾಟ

### ಹೆದ್ದಾರಿ ತಡೆದು ಪ್ರತಿಭಟನೆ, ಲಾಠಿ ಚಾರ್ಜ್, ಸ್ವಾಮೀಜಿ, ಮುಖಂಡರು ವಶಕ್ಕೆ

ಬೆಳಗಾವಿ, ಡಿ.10- ಇಲ್ಲಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಮಂಗಳವಾರ ನಡೆದ ಪಂಚಮಸಾಲಿ ಮೀಸಲಾತಿ ಹೋರಾಟ ಭಾರೀ ಸಂಘರ್ಷಕ್ಕೆ ದಾರಿ ಮಾಡಿತು. ಹೆದ್ದಾರಿ ತಡೆ ನಡೆಸಿದ ಪ್ರತಿಭಟನಾಕಾರರ ಮೇಲೆ ಪೊಲೀಸರು ಲಾಠಿ ಬೀಸಿದರು. ರೊಚ್ಚಿಗೆದ್ದ ಜನ ಪೊಲೀಸರ ಮೇಲೆ ಕಲ್ಲು, ಚಪ್ಪಲಿ ತೂರಿದರು.

ಇದರಿಂದ ಕೆಲವು ಪ್ರತಿಭಟನಾಕಾರರ ತಲೆ ಒಡೆದು ರಕ್ತ ಚೆಲ್ಲಿತು. ಹಲವರ ಕೈ, ಕಾಲುಗಳಿಗೆ ಪೆಟ್ಟು ಬಿದ್ದಿತು. ಹಲವರ ಬಟ್ಟೆಗಳು ಹರಿದವು.

ಅಷ್ಟೊತ್ತಿಗೆ ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೆದ್ದಾರಿಗೆ ಬಂದು ಅಲ್ಲೇ ಧರಣಿ ಕುಳಿತರು. ಪೊಲೀಸರು ಹಲವರನ್ನು ಬಸ್ಸಿನಲ್ಲಿ ಹತ್ತಿಸಿದರು. ಮುಂದೆ ಧಾವಿಸಿದ ಬಸನಗೌಡ ಪಾಟೀಲ್ ಯತ್ನಾಳ್, ಈರಣ್ಣ ಕಡಾಡಿ, ಅರವಿಂದ ಬೆಲ್ಲದ ಮುಂತಾದವರು ಪೊಲೀಸ್ ವಾಹನಗಳನ್ನು ಬಿಗಿಯಾಗಿ ಹಿಡಿದು ಎದುರಿಗೇ ನಿಂತರು. ಪೊಲೀಸರು ಅನಿವಾರ್ಯವಾಗಿ ಎಲ್ಲರನ್ನೂ ಕೆಳಗೆ ಇಳಿಸಿದರು.

2ಎ ಮೀಸಲಾತಿಗೆ ಆಗ್ರಹಿಸಿ ಪ್ರತಿಭಟನಾ ಸಮಾವೇಶ ನಡೆಸಿದ್ದ ಪಂಚಮಸಾಲಿಗರು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಥಳಕ್ಕೆ ಬಾರದ್ದನ್ನು ಖಂಡಿಸಿ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕಲು ಮುಂದಾದರು. ಮಧ್ಯಾಹ್ನದಿಂದ ಶಾಂತಿಯುತವಾಗಿ ಜನರನ್ನು ತಡೆದು ನಿಲ್ಲಿಸಿದ್ದ ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ, ಸಂಘರ್ಷ ಯಾತ್ರೆಯನ್ನು ಘೋಷಿಸಿದರು.

ಹೋರಾಟ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ (3ನೇ ಪುಟಕ್ಕೆ)

### ಅಮಾಯಕರ ಮೇಲೆ ದೌರ್ಜನ್ಯ; ಸ್ವಾಮೀಜಿ ಕಿಡಿ

ಸಮಾಜ ಬಾಂಧವರ ಮೇಲೆ ಲಾಠಿ ಚಾರ್ಜ್ ಮಾಡಿದ್ದು ಸರಿಯಲ್ಲ. ಅಮಾಯಕರ ಮೇಲೆ ದೌರ್ಜನ್ಯ ಮಾಡಲಾಗಿದೆ ಎಂದು ಪಂಚಮಸಾಲಿ ಜಗದ್ಗುರು ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದ್ದಾರೆ.

ಇದು ಬ್ರಿಟಿಷ್ ಸರ್ಕಾರ. ಪೊಲೀಸರ ಮೂಲಕ ಹೋರಾಟ ಹತ್ತಿಕ್ಕಲಾಗಿದೆ. ಸರ್ಕಾರ ಕೂಡಲೇ ಕ್ಷಮೆ ಕೇಳಬೇಕು. ನಮ್ಮ ಹೋರಾಟದ ಶಕ್ತಿ ಕುಂದಿಸಲು ಸಾಧ್ಯವಿಲ್ಲ ಎಂದರು.

### ಮೀಸಲಾತಿ ಚರ್ಚೆಗೆ ಕರೆದಿದ್ದರೂ ಆಗಮಿಸಿಲ್ಲ: ಸಿಎಂ

ಪಂಚಮಸಾಲಿ ಸಮುದಾಯದ ಮೀಸಲಾತಿ ಬೇಡಿಕೆ ಸಂಬಂಧ ಸಮುದಾಯದ ಮುಖಂಡರನ್ನು ಚರ್ಚೆಗೆ ಕರೆದಿದ್ದರೂ ಆಗಮಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಹೇಳಿದ್ದಾರೆ. ಮಂಗಳವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪ್ರಜಾ ಪ್ರಭುತ್ವದಲ್ಲಿ ಹೋರಾಟ ಕೈಗೊಳ್ಳಲು ಅವಕಾಶವಿದ್ದು, ಶಾಂತಿಯುತ ಹೋರಾಟಕ್ಕೆ ನಮ್ಮ ವಿರೋಧವಿಲ್ಲ ಎಂದು ಹೇಳಿದರು.

## ಎಸ್.ಎಂ. ಕೃಷ್ಣ ವಿಧಿವಶ

### ಮುಂಜಾನೆ 2.30ಕ್ಕೆ ನಿಧನ, ಇಂದು ಅಂತ್ಯಕ್ರಿಯೆ





ಬೆಂಗಳೂರು, ಡಿ. 10- ಬೆಂಗಳೂರು ನಗರವನ್ನು ಸಿಲಿಕಾನ್ ಸಿಟಿಯಾಗಿ ವಿಶ್ವಭೂಪಟದಲ್ಲಿ ಕಂಗೊಳಿಸುವಂತೆ ಮಾಡಿದ ಪದ್ಮವಿಭೂಷಣ, ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ (93) ವಿಧಿ ವಶರಾಗಿದ್ದಾರೆ.

ಸುದೀರ್ಘ ಕಾಲದಿಂದ ಉಸಿರಾಟದ ತೊಂದರೆ ಹಾಗೂ ಪಾರ್ಶ್ವವಾಯುವಿನಿಂದ ಬಳಲುತ್ತಿದ್ದ ಕೃಷ್ಣ ಅವರು, ಇಂದು ಮುಂಜಾನೆ 2-30ಕ್ಕೆ ಸದಾಶಿವನಗರದ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದರು.

ಮೃತರ ಪಾರ್ಥಿವ ಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ನಾಳೆ ಬೆಳಗ್ಗೆ 8 ಗಂಟೆವರೆಗೂ ಅವರ ನಿವಾಸದಲ್ಲಿ ಅವಕಾಶ ಮಾಡಿಕೊಡಲಾಗಿದ್ದು, ನಂತರ ಅವರ ಹುಟ್ಟೂರು ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಸೋಮನಹಳ್ಳಿಗೆ ಕೊಂಡೊಯ್ದು, ಅವರ ಜಮೀನಿನಲ್ಲಿ ಸಂಜೆ 4 ಗಂಟೆಗೆ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಗುವುದು.

ಕೃಷ್ಣ ಅವರ ಗೌರವಾರ್ಥ ಡಿಸೆಂಬರ್ 11, ಬುಧವಾರದಂದು ಸರ್ಕಾರಿ ರಜೆ ಘೋಷಣೆ ಮಾಡಲಾಗಿದ್ದು, ಇಂದಿನಿಂದ ಮೂರು ದಿನಗಳ ಕಾಲ ಶೋಕಾಚರಣೆ ಇರಲಿದೆ ಎಂದು ಸರ್ಕಾರ ಆದೇಶ ಹೊರಡಿಸಿದೆ.

ಎಸ್.ಎಂ.ಕೃಷ್ಣ ಅವರು ಪತ್ನಿ ಪ್ರೇಮಾ, ಇಬ್ಬರು ಪುತ್ರಿಯರಾದ ಮಾಳವಿಕಾ ಮತ್ತು ಶಾಂಭವಿ ಹಾಗೂ ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅಳಿಯ ಕಾಫಿಡೇ ಸಂಸ್ಥಾಪಕ ಸಿದ್ಧಾರ್ಥ ಆತ್ಮಹತ್ಯೆ ನಂತರ ಕೃಷ್ಣ ಅವರು ಮಾನಸಿಕವಾಗಿ ಬಹಳ ಕುಗ್ಗಿದ್ದರು.

1932ರ ಮೇ 1ರಂದು (3ನೇ ಪುಟಕ್ಕೆ)

### ಸರ್ಕಾರಿ ರಜೆ ಘೋಷಣೆ ಮೂರು ದಿನ ಶೋಕಾಚರಣೆ

ಬೆಂಗಳೂರು, ಡಿ. 10- ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಸೇರಿದಂತೆ ಗಣ್ಯಾತಿಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

ಕರ್ನಾಟಕದ (3ನೇ ಪುಟಕ್ಕೆ)

## ನರ್ಸ್‌ಗಳು ಸೇರಿ 1400 ಜನರ ವಿರುದ್ಧ ಪ್ರಕರಣ

### 700 ಕೋಟಿಗೂ ಹೆಚ್ಚು ಸಾಲ, ವಂಚನೆ

ತಿರುವನಂತಪುರ, ಡಿ.10- ಕುವೈತ್ ಬ್ಯಾಂಕ್‌ವೊಂದರಲ್ಲಿ 700 ಕೋಟಿಗೂ ಹೆಚ್ಚು ಸಾಲ ಪಡೆದು ಮರುಪಾವತಿ ಮಾಡದೇ ವಂಚಿಸಿದ ಆರೋಪದಡಿ ಕೇರಳದ ನರ್ಸ್‌ಗಳು ಸೇರಿದಂತೆ 1,400ಕ್ಕೂ ಹೆಚ್ಚು ಜನರ ವಿರುದ್ಧ ಪ್ರಕರಣ ದಾಖಲಾಗಿದೆ.

ಆರೋಪ ಎದುರಿಸುತ್ತಿರುವವರಲ್ಲಿ ಬಹುತೇಕರು ಶುಶ್ರೂಷಕಿಯರು ಎಂಬುದು ವಿಶೇಷ. ಕುವೈತ್‌ನಲ್ಲಿ ಕೆಲಸ ಮಾಡುತ್ತಿದ್ದ ವೇಳೆ 700 ಕೋಟಿ ರೂ.ಗೂ ಹೆಚ್ಚು ಸಾಲ ಪಡೆದು ವಂಚಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಬಹುತೇಕ ಸಾಲಗಾರರು (3ನೇ ಪುಟಕ್ಕೆ)


## ಶರಣ ಎ.ಕೆ. ಹಾಲಪ್ಪ ನಿಧನ

(ನಿವೃತ್ತ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಇ.ಬಿ.)



ದಾವಣಗೆರೆ ಸಿಟಿ, ಡೋರ್ ನಂ.1926ಎ/11, ತಿಪ್ಪೇರುದ್ರಸ್ವಾಮಿ ಕೃಪ, 3ನೇ ಮೇನ್, 3ನೇ ಕ್ರಾಸ್, ತರಳಬಾಳು ಬಡಾವಣೆ ವಾಸಿ

ದಿ. ನಾಗರತ್ನಮ್ಮ ಬಿ. ಎಸ್ ರವರ ಪತಿ

**ಶರಣ ಎ.ಕೆ. ಹಾಲಪ್ಪ** (83 ವರ್ಷ)

ಇವರು, ದಿನಾಂಕ: 10-12-2024 ರ ಮಂಗಳವಾರ ರಾತ್ರಿ 10:02 ಗಂಟೆಗೆ ನಿಧನರಾದರು.

ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಪಾರ್ಥಿವ ಶರೀರವನ್ನು ಮಧ್ಯಾಹ್ನ 1 ಗಂಟೆಯವರೆಗೆ ಅಂತಿಮ ದರ್ಶನಕ್ಕಾಗಿ ತರಳಬಾಳು ಬಡಾವಣೆಯ ಮೃತರ ಸ್ವಗೃಹದಲ್ಲಿ ಇರಿಸಲಾಗುವುದು.

ನಂತರ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ: 11-12-2024 ರಂದು ಬುಧವಾರ ಮಧ್ಯಾಹ್ನ 3 ಗಂಟೆಗೆ ದಾವಣಗೆರೆ ತಾಲ್ಲೂಕು ಸ್ವಗ್ರಾಮ ಕೆರೆಯಾಗಳಹಳ್ಳಿಯ ಮೃತರ ಜಮೀನಿನಲ್ಲಿ ನೆರವೇರಿಸಲಾಗುವುದು.

ಇಂತಿ ದುಃಖತಪ್ತರು

ಮಗ-ಸೊಸೆ: ಶ್ರೀಮತಿ ಗೌರಮ್ಮ ಶ್ರೀ ಕೆ.ಎಸ್. ಶಿವಮೂರ್ತಿ, ಎಇಇ, ಪಿಆರ್‌ಇಡಿ, ದಾವಣಗೆರೆ ಉಪವಿಭಾಗ.

ತಂಗಿ : ಕೆಂಚಮ್ಮ ಹಾಗೂ ಮಕ್ಕಳು, ಮೊಮ್ಮಕ್ಕಳು, ಅಳಿಯಂದಿರು, ಸೊಸೆಯಂದಿರು.

ಉಚ್ಚೆಂಗಮ್ಮ ವಂಶಸ್ಥರು, ಕೆರೆಯಾಗಳಹಳ್ಳಿ, ದ್ಯಾಮವ್ವನಹಳ್ಳಿ ವಂಶಸ್ಥರು

Mob: 94498 09621, 63605 48640, 81979 83642




# ಹರಪನಹಳ್ಳಿ: ಕೇಂದ್ರದ ಜನ ವಿರೋಧಿ ನೀತಿ ಖಂಡಿಸಿ ಸಿಪಿಐ ಪ್ರತಿಭಟನೆ




ಹರಪನಹಳ್ಳಿ,ಡಿ.10- ಅಗತ್ಯ ವಸ್ತುಗಳ ಬೆಲೆ ಏರಿಕೆ ಮತ್ತು ನಿರುದ್ಯೋಗ ಸಮಸ್ಯೆ ಪರಿಹರಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ. ಅಲ್ಲದೇ ಸರ್ಕಾರ ಜನ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಖಂಡಿಸಿ, ಭಾರತ ಕಮ್ಯುನಿಸ್ಟ್ ಪಕ್ಷದ ವತಿಯಿಂದ ಪ್ರತಿಭಟನೆ ನಡೆಸಿ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಯಿತು

ಭಾರತ ಕಮ್ಯುನಿಸ್ಟ್ ಪಕ್ಷದ ಕಾರ್ಯದರ್ಶಿ ಕಾಂ. ಗುಡಿಹಳ್ಳಿ ಹಾಲೇಶ್ ಮಾತನಾಡಿ, ಕೇಂದ್ರ ಸರ್ಕಾರ ಪ್ರಜಾತಂತ್ರ ವಿರೋಧಿ ಆಡಳಿತ ಮುಂದುವರಿಸಿದ್ದು, ಆಡಳಿತ ನಡೆಸಲು ಬೇಕಾದ ಸರಳ ಬಹುಮತಗಳನ್ನು ಪಡೆಯಲಾಗದ ಬಿಜೆಪಿ ಇತರೆ ಪ್ರಾದೇಶಿಕ ಪಕ್ಷಗಳ ಬೆಂಬಲ ದೊಂದಿಗೆ ಮೂರನೇ ಬಾರಿಗೆ ಅಧಿಕಾರದಲ್ಲಿ ಮುಂದುವರಿ ದಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ದೇಶದಲ್ಲಿ ರೈತ ಕಾರ್ಮಿಕರ ಸಮಸ್ಯೆಗಳ ಪರಿಹಾರಕ್ಕೆ ಪ್ರಾಮುಖ್ಯತೆ ನೀಡದೆ ಆದಾನಿ- ಅಂಬಾನಿಯಂತಹ ಬಂಡವಾಳ ಶಾಹಿಗಳ ಹಿತಾ ಸಕ್ತಿಗಾಗಿ ಅಧಿಕಾರ ಬಳಸುತ್ತಿದೆ ಎಂದು ದೂರಿದರು.

ದೇಶದಲ್ಲಿ ನಿರುದ್ಯೋಗಿಗಳ ಸಂಖ್ಯೆಯು ದಿನೇ ದಿನೇ ಹೆಚ್ಚುತ್ತಿದ್ದು, ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದಾಗಿ ಜನ ಸಾಮಾನ್ಯರು ಸಂಕಷ್ಟದ ಲ್ಲಿಯೇ ಬದುಕು ನಡೆಸುವಂತಾಗಿದೆ. ಸಂವಿಧಾನದ ಬಹುತ್ವದ ಆಶಯಗಳಿಗೆ ವಿರುದ್ಧವಾಗಿ ಏಕತ್ವದ ಪ್ರತಿಪಾದನೆ ಮುಂದುವರಿಸಿರುವ ಮೋದಿ ಸರ್ಕಾರ ಒಕ್ಕೂಟ ವ್ಯವಸ್ಥೆಗೆ ಮಾರಕವಾಗಲಿರುವ 'ಒಂದು ದೇಶ, ಒಂದು ಚುನಾವಣೆ' ಎಂಬ ವಿಷಯವನ್ನು ಪದೇ ಪದೇ ಮುನ್ನೆಲೆಗೆ ತರುತ್ತಿದೆ. ಮಣಿಪುರ, ಉತ್ತರ ಪ್ರದೇಶಗಳು ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ಜಾತಿ, ಜನಾಂಗೀಯ ಸಂಘರ್ಷಗಳು, ಕೋಮು ಭಾವನೆ ಕೆರಳಿಸುವ ಹಿಂಸಾಚಾರಗಳು ಭುಗಿಲೇಳುತ್ತಿದ್ದರೂ ಶಾಂತಿ ಸೌಹಾರ್ದತೆ ಬಲಪಡಿ ಸುವಲ್ಲಿ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಅವರು ಆರೋಪಿಸಿದರು.

ಪಕ್ಷದ ಜಿಲ್ಲಾ ಉಸ್ತುವಾರಿ ಹೆಚ್. ಎಂ.ಸಂತೋಷ ಮಾತನಾಡಿ, ಆದಾನಿ ಮೇಲಿನ ಲಂಚ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಲು ಸಂಸತ್ತಿನ ಜಂಟಿ ಸಂಸದೀಯ ಸಮಿತಿಯನ್ನು ರಚಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಿಪಿಐ ಆಗ್ರಹ ಪಡಿಸುತ್ತದೆ ಎಂದರು.

ಸಹ ಕಾರ್ಯದರ್ಶಿಗಳಾದ ಬಳಿಗಾನೂರು ಕೊಟ್ರೇಶ್ ಹಾಗೂ ರಮೇಶ್‌ನಾಯ್ಕ ಕಾರ್ಯ ಕಾರಿ ಮಂಡಳಿ ಸದಸ್ಯರಾದ ಪುಷ್ಪ, ವಿಶಾಲಮ್ಮ, ದೊಡ್ಡ ಬಸವರಾಜ, ಹರಿಯಮ್ಮನಹಳ್ಳಿ ಬಸವರಾಜ, ಶಿವರಾಮ್, ಎ.ದುರುಗೇಶ, ಡಿ.ಹೆಚ್.ಅರುಣ ಸೇರಿದಂತೆ ಇತರರು ಇದ್ದರು.

# ಪುಣ್ಯದ ಕೆಲಸಗಳಿಂದ ಜೀವನ ಸಾರ್ಥಕ : ಮಲ್ಲಿಕಾರ್ಜುನ ಶ್ರೀ



ಜಗಳೂರು, ಡಿ. 10 - ಪಂಚಭೂತಗಳಿಂದ ರಚಿತವಾದ ದೇಹ, ಜೀವ, ತೊರೆದ ಮೇಲೆ ಅದೇ ಪಂಚಭೂತಗಳಲ್ಲಿ ವಿಲೀನವಾಗಲಿದೆ. ಮನುಷ್ಯ ಜೀವನ ಸಾರ್ಥಕ ಗೊಳಿಸಲು ಇದ್ದಾಗಲೇ ಪುಣ್ಯದ ಕೆಲಸ ಮಾಡಿ ಎಂದು ಬೆಂಗಳೂರು ಸರ್ಪ ಭೂಷಣ ಮಠದ ಪೀಠಾಧ್ಯಕ್ಷರು ಶ್ರೀ ಮಲ್ಲಿಕಾರ್ಜುನ ದೇವರು ಹೇಳಿದರು.

ತಾಲ್ಲೂಕಿನ ದೊಣ್ಣೆಹಳ್ಳಿ ಐತಿಹಾಸಿಕ ಶ್ರೀ ಶರಣ ಬಸವೇಶ್ವರ ದಾಸೋಹ ಮಠದ ವತಿಯಿಂದ ಆಯೋಜಿಸಿದ್ದ ಕಾರ್ತಿಕ ಮಾಸ ದೀಪೋತ್ಸವ ಹಾಗು ಧರ್ಮ ಸಭೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ

ಮಾತನಾಡಿದ ಅವರು ಇದ್ದುದ್ದನ್ನು ಕಳೆದುಕೊಳ್ಳಲು ನಿಸ್ವಾರ್ಥ ಸೇವೆಯಿಂದ ಇರುವಷ್ಟರಲ್ಲಿಯೇ ಮತ್ತೊಬ್ಬರಿಗೆ ದಾನ ಧರ್ಮ ಮಾಡಬೇಕು ಎಂದು ಭಕ್ತರಿಗೆ ಸಲಹೆ ನೀಡಿದರು

ಕಾನಾಮಡುಗು ಶರಣ ಬಸವೇಶ್ವರ ದಾಸೋಹಿಹ ಮಠದ ಧರ್ಮದರ್ಶಿ ಐರ್ಮುಡಿ ಶರಣಾರ್ಯರು ಮಾತನಾಡಿ ಅಜ್ಞಾನದ ಕತ್ತಲು ತುಂಬಿದ ಸಮಾಜಕ್ಕೆ ಜ್ಞಾನದ ಬೆಳಕು ಚೆಲ್ಲುವ ಸಂಕೇತವೇ ಈ ದೀಪೋತ್ಸವ ಆಚರಣೆಯಾಗಿದೆ. ಐತಿಹಾಸಿಕ ಹಿನ್ನೆಲೆ ಹೊಂದಿರುವ ಶರಣ ಬಸವೇಶ್ವರ ಮಠ ಸರ್ವ ಜನಾಂಗಕ್ಕೂ ಅಕ್ಷರ ಅರಿವು ಹಾಗು ದಾಸೋಹ ಮಾಡುವ ಮೂಲಕ ಜನರ ಅಂಧಕಾರ ದೂರಮಾಡಿ ಜೀವನ ಹಸನುಗೊಳಿಸುವ ಕಾರ್ಯ ಮಾಡುತ್ತಾ ಬಂದಿದೆ ಎಂದರು.

ಮಾಜಿ ಶಾಸಕ ಹೆಚ್.ಪಿ. ರಾಜೇಶ್ ಮಾತನಾಡಿ ಜಗಳೂರು ಎಂಬ ಬರದ ನಾಡಿನಲ್ಲಿ ದೊಣ್ಣೆಹಳ್ಳಿ ಐತಿಹಾಸಿಕ ಕ್ಷೇತ್ರ. ಶರಣ ಬಸವೇಶ್ವರ ಅವರು ಇಲ್ಲಿ ನೆಲೆಸಿ ಭಕ್ತರಿಗೆ ಇಷ್ಟಾರ್ಥಗಳನ್ನು ನೆರವೇರಿಸಿ ಹಲವು ಪವಾಡಗಳನ್ನು ಮಾಡಿದ ಐತಿಹಾಸಿಕ ಹಿನ್ನೆಲೆಯಿದೆ. ವಿಶೇಷವಾಗಿ ಈ ಭಾಗದಲ್ಲಿ ಸಿರಿಧಾನ್ಯಗಳನ್ನ ಬೆಳೆದು ಮೊದಲ ಬೆಳೆ ಮಠಕ್ಕೆ ಅರ್ಪಿಸಿ ಎಲ್ಲಾ ಸಮುದಾಯಕ್ಕೂ ದಾಸೋಹ ನಡೆಸಲಾಗುತ್ತಿದೆ ಎಂದು ಹೇಳಿದರು

ಗ್ರಾಮದ ಹಿರಿಯ ಪತ್ರಕರ್ತ ದೊಣ್ಣೆಹಳ್ಳಿ ಗುರುಮೂರ್ತಿ ಮಾತನಾಡಿ ಮಧ್ಯ ಕರ್ನಾಟಕ ಹಾಗೂ ಉತ್ತರ ಕರ್ನಾಟಕದ ಹೆಬ್ಬಾಗಿಲಿನಂತೆ ಇರುವ ಈ ಮಠ ಜಾತ್ಯತೀತ ವಾದ ಬುದ್ದ, ಬಸವಣ್ಣ, ಅಂಬೇಡ್ಕರ್ ಚಿಂತನೆ ಜೊತೆಗೆ ಸಾಂಸ್ಕೃತಿಕ, ಪಾರಂಪರಿಕ ಮಠವನ್ನಾಗಿ ಕಟ್ಟುವುದೇ ನಮ್ಮ ಸಂಕಲ್ಪವಾಗಿದೆ ಎಂದು ತಿಳಿಸಿದರು

ಜಿ.ಪಂ. ಮಾಜಿ ಸದಸ್ಯ ಕೆ.ಪಿ. ಪಾಲಯ್ಯ ಮಾತನಾಡಿ ಬರೀ ರಾಜಕಾರಣಿಗಳಿಂದ ಅಷ್ಟೇ ಮಠ ಬೆಳವಣಿಗೆ ಕಾಣದು ಮಠದ ಭಕ್ತರ ಸೇವೆ ಮತ್ತು ಸಹಕಾರದಿಂದ ಅಭಿವೃದ್ಧಿ ಯಾಗಬೇಕಿದೆ ಎಂದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ಬಾಪೂಜಿ ವಿದ್ಯಾ ಸಂಸ್ಥೆ ಕಾರ್ಯದರ್ಶಿ ಕೆ.ಎಂ. ವೀರೇಶ್, ಚಿತ್ರದುರ್ಗ ವೀರಶೈವ ಸಮಾಜದ ಅಧ್ಯಕ್ಷ ಷಣ್ಮುಖಪ್ಪ. ಗ್ರಾ.ಪಂ.ಅಧ್ಯಕ್ಷ ತಿಪ್ಪೇಸ್ವಾಮಿ, ಜಿ.ಪಂ. ಮಾಜಿ ಅಧ್ಯಕ್ಷೆ ನಾಗರತ್ನಮ್ಮ ಮಾಲತೇಶ್, ಜಾನಪದ ಕಲಾವಿದ ಬಿಷ್ಣಹಳ್ಳಿ ದಳವಾಯಿ, ವಿ.ಎಸ್.ಎಸ್.ಎನ್ ಅಧ್ಯಕ್ಷ ಪ್ರಕಾಶ್ ರೆಡ್ಡಿ , ಗ್ರಾಮದ ಹಿರಿಯ ಮುಖಂಡ ಬಸವರಾಜಯ್ಯ , ನಾಗಲಿಂಗಪ್ಪ, ಸುಭಾಷ್ ಚಂದ್ರ ಬೋಸ್ , ಸೇರಿದಂತೆ ಗ್ರಾ.ಪಂ. ಸದಸ್ಯರು, ಭಕ್ತಾದಿಗಳು ಇದ್ದರು.

# ಎಸ್.ಎಂ. ಕೃಷ್ಣ ಜೀವನ ತೆರೆದ ಪುಸ್ತಕವಿದ್ದಂತೆ

**-ಶಾಸಕ ಕೆ.ಎಸ್. ಬಸವಂತಪ್ಪ ಪ್ರಶಂಸೆ**

ದಾವಣಗೆರೆ, ಡಿ.10 - ಇಂದಿನ ತಲೆಮಾರಿನ ರಾಜಕಾರಣಿಗಳಿಗೆ ಅವರ ರಾಜಕೀಯ ಜೀವನ ತೆರೆದಿರುವ ಪುಸ್ತಕ. ಬೆಂಗಳೂರು ಮತ್ತು ರಾಜ್ಯದ ಅಭಿವೃದ್ಧಿಯಲ್ಲಿ ಮಹತ್ತರ ಕೊಡುಗೆ ನೀಡಿದ್ದಾರೆ. ಅವರಿಂದಲೇ ಬೆಂಗಳೂರು ವಿಶ್ವ ಮಟ್ಟದಲ್ಲಿ ಸಿಲಿಕಾನ್ ಸಿಟಿ, ಐಟಿ-ಬಿಟಿ ಸಿಟಿ ಎಂಬ ಹೆಸರು ಬಂದಿತ್ತು. ಯಶಸ್ವಿನಿ ಯೋಜನೆ, ಸ್ತ್ರೀಶಕ್ತಿ ಸಂಘಗಳ ಉಗಮ, ಮಕ್ಕಳಿಗೆ ಬಿಸಿಯೂಟ, ಅಕ್ಷರ ದಾಸೋಹ ಹೀಗೆ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ ಧೀಮಂತ ನಾಯಕ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಎಸ್.ಎಂ.ಕೃಷ್ಣ ಅವರ ಕಾರ್ಯಗಳನ್ನು ಸ್ಮರಿಸಿದ್ದಾರೆ.

ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದಲ್ಲಿ ತಲೆದೋರಿದ್ದ ಕಾವೇರಿ ಚಳವಳಿ, ಡಾ.ರಾಜ್‌ಕುಮಾರ್ ಅಪಹರಣ ಪ್ರಕರಣ, ಬರಗಾಲದ ಬಿಸಿ ಇಂತಹ ಕಠಿಣ ಸಂದರ್ಭದಲ್ಲಿ ವಿಪಕ್ಷಗಳ ಟೀಕೆಗಳನ್ನು ಸಮರ್ಥವಾಗಿ ಎದುರಿಸಿ ಆ ಸಮಸ್ಯೆಗಳಿಗೆ ಪರಿಹಾರ ನೀಡಿದ್ದರು. ಮುಖ್ಯಮಂತ್ರಿ, ವಿದೇಶಾಂಗ ಸಚಿವ, ರಾಜ್ಯಪಾಲರಂತಹ ಹುದ್ದೆಗಳನ್ನು ಸಮರ್ಥವಾಗಿ ನಿಭಾಯಿಸಿದ್ದಾರೆ.

ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ. ಅವರ ಕುಟುಂಬ ವರ್ಗದವರಿಗೆ ಅವರ ಅಗಲಿಕೆಯ ನೋವು ಭರಿಸುವ ಶಕ್ತಿ ನೀಡಲಿ ಎಂದು ಅವರು ಪ್ರಾರ್ಥಿಸಿದ್ದಾರೆ.

# ಉಕ್ಕಡಗಾತ್ರಿ : ರಾಜ್ಯಮಟ್ಟದ ಭಜನಾ ಸ್ಪರ್ಧೆ ಹೊಸೂರು, ಶ್ರೀನಿವಾಸಪುರ ತಂಡಗಳು ಪ್ರಥಮ



ಮಲೇಬೆನ್ನೂರು, ಡಿ. 10- ಸುಕ್ಷೇತ್ರ ಉಕ್ಕಡಗಾತ್ರಿಯಲ್ಲಿ ಪವಾಡ ಪುರುಷ ಶ್ರೀ ಗುರು ಕರಿಬಸವೇಶ್ವರ ಅಜ್ಜಯ್ಯನ ಕಾರ್ತಿಕೋತ್ಸವದ ಅಂಗವಾಗಿ ಸೋಮವಾರ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಭಜನಾ ಸ್ಪರ್ಧೆಯಲ್ಲಿ 39 ಭಜನಾ ತಂಡಗಳು ಭಾಗವಹಿಸಿದ್ದವು.

27 ಪುರುಷ ತಂಡಗಳು ಮತ್ತು 12ಮಹಿಳಾ ತಂಡಗಳು ಸ್ಪರ್ಧೆಯಲ್ಲಿ ಪಾಲ್ಗೊಂಡು ತಮ್ಮ ಪ್ರತಿಭೆ ಪ್ರದರ್ಶಿಸಿ, ಜನರ ಗಮನ ಸೆಳೆದವು.

ಬೆಳಿಗ್ಗೆ 10 ಗಂಟೆಗೆ ಈ ಭಜನಾ ಸ್ಪರ್ಧೆಗೆ ನಂದಿಗುಡಿ ಬೃಹನ್ಮಠದ ಶ್ರೀ ಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮೀಜಿ ಅವರು ದೀಪ ಬೆಳಗಿಸಿ ಚಾಲನೆ ನೀಡಿದ್ದರು.

ದಿನವಿಡೀ ನಡೆದ ಸ್ಪರ್ಧೆಯಲ್ಲಿ ಅಂತಿಮವಾಗಿ ಪುರುಷರ ತಂಡದಲ್ಲಿ ರಾಮದುರ್ಗ ತಾಲ್ಲೂಕಿನ ಹೊಸೂರಿನ ಶಬರಿ ದೇವಿ ಭಜನಾ ಮಂಡಳಿ ಪ್ರಥಮ ಸ್ಥಾನ ಮತ್ತು ಮಹಿಳೆಯರ ತಂಡದಲ್ಲಿ ಭದ್ರಾವತಿ ತಾಲ್ಲೂಕಿನ ಶ್ರೀನಿವಾಸಪುರದ ಶ್ರೀ ರಾಮ ಭಜನಾ ಸಂಘವು ಪ್ರಥಮ ಸ್ಥಾನ ಪಡೆದವು.

ಪುರುಷರ ತಂಡದಲ್ಲಿ ನರಗುಂದ ತಾಲ್ಲೂಕಿನ ಕೊಣ್ಣೂರು ಶ್ರೀ ಬಾಯಮ್ಮದೇವಿ ಭಜನಾ ಸಂಘವು ದ್ವಿತೀಯ ಸ್ಥಾನ ಮತ್ತು ಮಹಿಳೆಯರ ತಂಡದಲ್ಲಿ ಶಿಕಾರಿಪುರ ತಾ. ಗ್ರಾಮ ಶ್ರೀ ಪ್ರಗತಿ ಯುವತಿ ಭಜನಾ ಮಂಡಳಿಗೆ ದ್ವಿತೀಯ ಸ್ಥಾನ ಲಭಿಸಿತು.

ಪುರುಷರ ತಂಡದಲ್ಲಿ ಮುಂಡಗೋಡು ತಾ. ಜಿಗಳ್ಳಿಯ ಶ್ರೀ ವೀರೇಶ್ವರ ಭಜನಾ ಸಂಘವು ತೃತೀಯ ಸ್ಥಾನ ಪಡೆದರೆ ಮಹಿಳಾ ತಂಡದಲ್ಲಿ ಹೊಳಲ್ಕೆರೆ ತಾ. ಮಲ್ಲಾಡಿಹಳ್ಳಿಯ ಹರೇ ಶ್ರೀನಿವಾಸ ಭಜನಾ ಮಂಡಳಿಗೆ ತೃತೀಯ ಸ್ಥಾನ ಲಭಿಸಿತು.

ಪ್ರಥಮ ಸ್ಥಾನ ಪಡೆದ ತಂಡಗಳಿಗೆ ತಲಾ 25 ಸಾವಿರ ರೂ. ನಗದು ಬಹುಮಾನ ಮತ್ತು ದ್ವಿತೀಯ ಸ್ಥಾನ ಪಡೆದ ತಂಡಗಳಿಗೆ ತಲಾ 15 ಸಾವಿರ ರೂ. ನಗದು ಬಹುಮಾನ ಹಾಗೂ ತೃತೀಯ ಸ್ಥಾನ ಪಡೆದ ತಂಡಗಳಿಗೆ ತಲಾ 10 ಸಾವಿರ ರೂ.ಗಳ ಬಹುಮಾನ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ನಂದಿಗುಡಿ ಬೃಹನ್ಮಠದ ಶ್ರೀ ಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮೀಜಿ ಗದ್ದುಗೆ ಟ್ರಸ್ಟ್ ಕಮಿಟಿ ಕಾರ್ಯದರ್ಶಿ ಸುರೇಶ್ ಸೇರಿದಂತೆ ಟ್ರಸ್ಟ್ ಸದಸ್ಯರು, ಗ್ರಾ.ಪಂ. ಅಧ್ಯಕ್ಷ ಸದಸ್ಯರು ಮತ್ತು ಗ್ರಾಮದ ಮುಖಂಡರು ಬಹುಮಾನ ವಿತರಣೆಯಲ್ಲಿ ಪಾಲ್ಗೊಂಡಿದ್ದರು.

# ನಗರದಲ್ಲಿ ಇಂದಿನಿಂದ 15 ರವರೆಗೆ ಸ್ವದೇಶಿ ಮೇಳ

ದಾವಣಗೆರೆ, ಡಿ. 10 - ಜನರಿಗೆ ಸ್ವದೇಶಿ ವಸ್ತುಗಳನ್ನು ಪರಿಚಯ ಮಾಡಿಸುವ ಸದುದ್ದೇಶ ಹಾಗೂ ಸ್ಥಳೀಯ ಉತ್ಪಾದಕರಿಗೆ ಮಾರುಕಟ್ಟೆ ಕಲ್ಪಿಸುವ ದೃಷ್ಟಿಯಿಂದ ಇದೇ ದಿನಾಂಕ 11 ರಿಂದ 15 ರವರೆಗೆ ಮೂರು ದಿನಗಳ ಕಾಲ ನಗರದ ಬಾಲಕರ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ 'ಬೃಹತ್ ಸ್ವದೇಶಿ ಮೇಳ' ಆಯೋಜಿಸಲಾಗಿದೆ ಎಂದು ಸ್ವದೇಶಿ ಜಾಗರಣ ಮಂಚ್- ಕರ್ನಾಟಕದ ಕೆ. ಜಗದೀಶ್ ಮಾಹಿತಿ ನೀಡಿದರು.

ಈ ಮೇಳದಲ್ಲಿ ಸುಮಾರು 250 ಕ್ಕೂ ಹೆಚ್ಚು ವಿವಿಧ ರೀತಿಯ ಮಳಿಗೆಗಳು ತೆರೆಯಲಿವೆ. ದೇಶೀಯ ಕ್ರೀಡೆ, ದೇಶೀಯ ಆಹಾರಗಳು, ದೇಶೀಯ ಉಡುಗೆ-ತೊಡುಗೆಗಳು, ದೇಶಿಯ ಹಸುಗಳ ಪ್ರದರ್ಶನ, ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು, ವಿವಿಧ ತರಬೇತಿ ಶಿಬಿರಗಳನ್ನು ಏರ್ಪಾಡು ಮಾಡಲಾಗುವುದು ಎಂದರು.

ಈ ಮೇಳಕ್ಕೆ ಸಾರ್ವಜನಿಕರಿಗೆ ಉಚಿತ ಪ್ರವೇಶವಿದ್ದು, ಎರಡು ಲಕ್ಷಕ್ಕೂ ಅಧಿಕ ಜನರು ವೀಕ್ಷಿಸುವ ನಿರೀಕ್ಷೆ ಇದೆ. ದಿನಾಂಕ 11 ರಂದು ಸಂಜೆ 5.30 ಕ್ಕೆ ಕಾರ್ಯಕ್ರಮದ ಉದ್ಘಾಟನೆ ನೆರವೇರಲಿದ್ದು, ಕನ್ನಡ ಚಿತ್ರನಟಿ ತಾರಾ ಅನುರಾಧ, ಶಾಸಕ ಡಾ. ಶಾಮನೂರು ಶಿವಶಂಕರಪ್ಪ ಮೇಳಕ್ಕೆ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಜಗದ್ಗುರು ಶ್ರೀ ವಚನಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಎಸ್.ಎ. ರವೀಂದ್ರನಾಥ್, ಜವಳಿ ಉದ್ಯಮಿ ಬಿ.ಸಿ. ಉಮಾಪತಿ, ಸ್ವದೇಶಿ ಚಿಂತಕ ಶಿವಮೊಗ್ಗದ ಕುಮಾರಸ್ವಾಮಿ ಭಾಗವಹಿಸಲಿದ್ದಾರೆಂದರು.

ಪತ್ರಿಕಾಗೋಷ್ಠಿಯಲ್ಲಿ ಸಂಯೋಜಕ ಎಸ್.ಟಿ. ವೀರೇಶ, ಎಸ್. ಚೇತನ್, ಮಂಜುಳಾ ಮಹೇಶ್, ಪ್ರದೀಪ್, ಶರತ್ ಮತ್ತಿತರರಿದ್ದರು.

# ಸೌಡಿಗಳ ಬಾಕಿ ವೇತನ ಬಿಡುಗಡೆಗೆ ರಾಮಪ್ಪ ಪಟ್ಟು : 2 ತಿಂಗಳ ವೇತನ ನೀಡುವ ಭರವಸೆ



ಮಲೇಬೆನ್ನೂರು, ಡಿ.10- ಇಲ್ಲಿನ ನೀರಾವರಿ ಕಛೇರಿಗೆ ಮಂಗಳವಾರ ಭೇಟಿ ನೀಡಿದ ಮಾಜಿ ಶಾಸಕ ಎಸ್ ರಾಮಪ್ಪ ಅವರು ಬಾಕಿ ವೇತನ ನೀಡುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದ ಸೌಡಿಗಳ ಜೊತೆ ಸಮಸ್ಯೆ ಕುರಿತು ಚರ್ಚಿಸಿದರು. ಹಲವಾರು ತಿಂಗಳುಗಳಿಂದ ವೇತನವಿಲ್ಲದೆ ತೊಂದರೆಯಲ್ಲಿದ್ದೇವೆ ಎಂದು ದಿನಗೂಲಿ ನೌಕರರು ತಮ್ಮ ಅಳಲನ್ನು ತೋಡಿಕೊಂಡರು.

ಕೂಡಲೇ ಕಛೇರಿಯಲ್ಲಿ ಅಧಿಕಾರಿಗಳೊಂದಿಗೆ ಹಾಗೂ ಸಂಬಂಧಿಸಿದ ಟೆಂಡರ್ ದಾರರೊಂದಿಗೆ ಮುಖಾಮುಖಿ ಚರ್ಚೆ ನಡೆಸಿ, ವೇತನ ಬಿಡುಗಡೆ ಮಾಡುವಂತೆ ಪಟ್ಟು ಹಿಡಿದ ಪರಿಣಾಮ ಟೆಂಡರ್ ದಾರರು ಅಧಿಕಾರಿಗಳೊಂದಿಗೆ ಟೆಂಡರ್ ಅಗ್ರಿಮೆಂಟ್ ಗೆ ಸಹಿ ಮಾಡಿದರು. ಅಗ್ರಿಮೆಂಟ್ ಮಾಡಿಕೊಂಡಿರುವ ಟೆಂಡರ್ ದಾರರು ಕೂಡಲೇ 2 ತಿಂಗಳ ವೇತನವನ್ನೂ ಸೌಡಿಗಳ ಖಾತೆಗೆ ನೀಡಲು ಒಪ್ಪಿದ್ದು, ಇನ್ನುಳಿದ ವೇತನವನ್ನು ಸಹ ಮುಂದಿನ ದಿನಗಳಲ್ಲಿ ತಡಮಾಡದೇ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದ್ದಾರೆ ಎನ್ನಲಾಗಿದೆ. ಬಾಕಿ ವೇತನ ಬಿಡುಗಡೆಗೆ ಶ್ರಮವಹಿಸಿದ ಮಾಜಿ ಶಾಸಕ ಎಸ್.ರಾಮಪ್ಪ ಅವರನ್ನು ದಿನಗೂಲಿ ನೌಕರರು ಅಭಿನಂದಿಸಿದರು.

# ಕ್ಷತ್ರಿಯ ಅಭಿವೃದ್ಧಿ ನಿಗಮ ಸ್ಥಾಪನೆಗೆ ಆಗ್ರಹ



ಹರಿಹರ, ಡಿ.10- ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜದ ಅಭಿವೃದ್ಧಿ ನಿಗಮ ಸ್ಥಾಪಿಸುವ ಹಾಗೂ ಎಸ್ಸಿ ಮೀಸಲಾತಿ ಸೌಲಭ್ಯ ನೀಡಲು ಬೆಳಗಾವಿ ಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ತೀರ್ಮಾನ ತೆಗೆದುಕೊಳ್ಳಲು ವಿಧಾನಸಭೆಯ ಎಲ್ಲಾ ಸದಸ್ಯರು ಬೆಂಬಲ ನೀಡುವಂತೆ ಎಸ್.ಎಸ್.ಕೆ ಸಮಾಜ ಅಭಿವೃದ್ಧಿ ಹೋರಾಟ ಸಮಿತಿ ಸರ್ಕಾರವನ್ನು ಆಗ್ರಹಿಸಿದೆ.

ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ಈ ವಿಷಯ ಪ್ರಸ್ತಾಪಿಸಿ, ಸರ್ಕಾರಕ್ಕೆ ಒತ್ತಡ ಹಾಕುವು ದಕ್ಕಾಗಿ ನಗರದಿಂದ ಸಮಾಜದವರು ಭಾಗವಹಿಸಲು ನಿರ್ಧರಿಸಲಾಗಿತ್ತು. ಆದರೆ, ಈ ಕಾರ್ಯಕ್ರಮವನ್ನು ಮುಂದೂಡಲಾಗಿದೆ ಎಂದು ಸಮಿತಿಯ ಜಿಲ್ಲಾ ಕಾರ್ಯದರ್ಶಿ ಮೋತಿಲಾಲ್ ಖಿರೋಜಿ ಅವರು ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದರು.

ಸ್ವಾತಂತ್ರ್ಯ ಪೂರ್ವ ದಿಂದಲೂ ನೇಕಾರಿಕೆ, ಕೈಮಗ್ಗ, ರೇಷ್ಮೆಗೆ ಬಣ್ಣ ಹಾಕುವುದು ಸಮಾಜದ ಹಿರಿಯರ ಕಸುಬು ಆಗಿತ್ತು, ಆದರೆ ಕಾಲ ಬದಲಾದಂತೆ ನಮ್ಮ ಸಮಾಜ ಬಾಂಧವರು ಚಿಕ್ಕ ಪುಟ್ಟ ವ್ಯಾಪಾರ ವಹಿವಾಟು ನಡೆಸುವ ಮೂಲಕ ಜೀವನ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಸುಮಾರು 6 -7 ಲಕ್ಷ ಜನಸಂಖ್ಯೆಯನ್ನು ಹೊಂದಿದ್ದು, ಶೇ. 80 ರಷ್ಟು ಬಡತನ ರೇಖೆಗಿಂತ ಕೆಳಗಿದ್ದಾರೆ. ನಿಶ್ಚಿತ ಆದಾಯ ಇಲ್ಲವಾಗಿದೆ. ಮಕ್ಕಳಿಗೆ ಸರಿಯಾದ ವಿದ್ಯಾ ಭ್ಯಾಸ ನೀಡುವುದಕ್ಕೂ ಆಗುತ್ತಿಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್.ಎಸ್.ಕೆ ಸಮಾಜ ಹೋರಾಟ ಸಮಿತಿಯ ಉಪಾಧ್ಯಕ್ಷ ಶ್ರೀಕಾಂತ್ ಮೆಹರ್ವಾಡೆ, ತಾಲ್ಲೂಕು ಅಧ್ಯಕ್ಷ ವಿಕ್ರಮ ಮೆಹರ್ವಾಡೆ, ನಿರ್ದೇಶಕ ನರೇಶ ಕೆ. ಖಿರೋಜಿ ಇತರರು ಹಾಜರಿದ್ದರು.

# ಮತದಾರರ ಪಟ್ಟಿಗೆ ಸೇರುವಂತೆ ಯುವ ಮತದಾರರಿಗೆ ಜಾಗೃತಿ



ಮಲೇಬೆನ್ನೂರು, ಡಿ. 10- ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಶ್ರೀ ಬೀರಲಿಂಗೇಶ್ವರ ಪದವ ಪೂರ್ವ ಕಾಲೇಜು ಹಾಗೂ ಶ್ರೀ ಬೀರಲಿಂಗೇಶ್ವರ ಪ್ರಥಮ ದರ್ಜೆ ಕಾಲೇಜಿನಲ್ಲಿ ಮುಖ್ಯ ಚುನಾವಣಾಧಿಕಾರಿಗಳ ನಿರ್ದೇಶನದ ಮೇರೆಗೆ ಮತದಾರರ ಪಟ್ಟಿಗೆ ಯುವ ಮತದಾರರ ಸೇರ್ಪಡೆ ಕುರಿತು ಉಪತಹಶೀಲ್ದಾರ್ ಆರ್. ರವಿ ಅವರು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು.

ಬೀರಲಿಂಗೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ಮಾತನಾಡಿದ ರವಿ ಅವರು, 18 ವರ್ಷ ಮೇಲ್ಪಟ್ಟವರು ಕೂಡಲೇ ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ಸೇರ್ಪಡೆ ಮಾಡಿಕೊಳ್ಳಬೇಕು.

ಭಾವಚಿತ್ರ, ಆಧಾರ್ ಕಾರ್ಡ್ ಜೆರಾಕ್ಸ್, ಹುಟ್ಟಿದ ದಿನಾಂಕಕ್ಕಾಗಿ ಶಾಲಾ ದಾಖಲಾತಿ ಮತ್ತು ಪೋಷಕರ ಗುರುತಿನ ಚೀಟಿಯೊಂದಿಗೆ ಗ್ರಾಮ ಆಡಳಿತಾಧಿಕಾರಿಗಳ ಕಚೇರಿ ಅಥವಾ ನಾಡ ಕಚೇರಿಗೆ ಭೇಟಿ ನೀಡಿ ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು.

ನೀವು ಮತದಾರರ ಪಟ್ಟಿಗೆ ಸೇರ್ಪಡೆಯಾದರೆ ಸಾರ್ವತ್ರಿಕ ಚುನಾವಣೆಗಳಲ್ಲಿ ಶ್ರೇಷ್ಠ ನಾಯಕ ಅಥವಾ ನಾಯಕಿಯನ್ನು ಆಯ್ಕೆ ಮಾಡುವ ಹಕ್ಕು ನಿಮಗೆ ಸಿಗಲಿದೆ ಎಂದು ಆರ್. ರವಿ ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ಹಿಂಡಸಘಟ್ಟಿ ಹನುಮಗೌಡ ಮಾತನಾಡಿ, ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಯುವ ಮತದಾರರ ಪಾತ್ರ ಬಹಳ ಮುಖ್ಯವಾಗಿದ್ದು, ಈ ನಿಟ್ಟಿನಲ್ಲಿ 18 ವರ್ಷ ದಾಟಿದ ತಕ್ಷಣ ವಿದ್ಯಾರ್ಥಿಗಳು ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ಕಡ್ಡಾಯವಾಗಿ ಸೇರ್ಪಡೆ ಮಾಡಿಸಿಕೊಳ್ಳುವ ಮೂಲಕ ದೇಶದ ಪೌರತ್ವ ಪಡೆಯಬೇಕೆಂದರು.

ಗ್ರಾಮ ಆಡಳಿತಾಧಿಕಾರಿಗಳಾದ ಅಣ್ಣಪ್ಪ, ಷರೀಫ್, ದೇವರಾಜ್, ಕಾಲೇಜಿನ ಉಪನ್ಯಾಸಕ ಶಂಭುಲಿಂಗಪ್ಪ, ಪತ್ರಕರ್ತ ಜಿಗಳಿ ಪ್ರಕಾಶ್, ಗ್ರಾಮ ಸಹಾಯಕ ಮಾರುತಿ ಈ ವೇಳೆ ಹಾಜರಿದ್ದರು.


# ನಗರದೇವತೆ ದೇವಸ್ಥಾನದಲ್ಲಿ ಕಳ್ಳರ ಕೈಚಳಕ.! ಆಭರಣ ಜೊತೆ ಸಿಸಿ ಕ್ಯಾಮರಾವನ್ನೂ ಕದ್ದೊಯ್ದರು

ರಾಣೇಬೆನ್ನೂರು,ಡಿ.10- ನಿನ್ನೆ ರಾತ್ರಿ ಇಲ್ಲಿನ ನಗರದೇವತೆ ತುಂಗಾಜಲ ಚೌಡೇಶ್ವರಿ ದೇವಿಯ ದೇವಸ್ಥಾನದ ಬಾಗಿಲು ಬೀಗ ಮುರಿದು ಸುಮಾರು 13 ಕೆ.ಜಿ ತೂಕದ ಬೆಳ್ಳಿಯ ಆಭರಣ ಹಾಗೂ 1 ತೊಲ ತೂಕದ ತಾಳಿಸರದ ಜೊತೆಗೆ ಸಿಸಿ ಕ್ಯಾಮರಾವನ್ನೂ ಕಳ್ಳತನ ಮಾಡಲಾಗಿದೆ. ಪತ್ತೆ ಮಾಡುವಂತೆ ನಗರ ಆರಕ್ಷಕ ಠಾಣೆಗೆ ದೇವಸ್ಥಾನ ಸಮಿತಿಯ ಅಧ್ಯಕ್ಷ, ನಗರಸಭೆ ಸದಸ್ಯ ಶೇಖಪ್ಪ ಹೊಸಗೌಡ್ರ ದೂರು ಸಲ್ಲಿಸಿದ್ದಾರೆ.

ದೇವಸ್ಥಾನದಲ್ಲಿದ್ದ ನಾಗರ ಹೆಡೆ, ದೇವಿ ಮುಖ, ಎರಡು ಕಾಲು, ದೇವಿಯ ಸಂಪೂರ್ಣ ಕವಚ, ಎರಡು ಕೈ, ಖಡ್ಗ, ಕುಂಕುಮ ಭರಣಿ, ಕಾಲು ಕಡಗ, ಕೈ ಕಡಗ, ಎರಡು ಹಸ್ತ, ಎರಡು ಬಿಂದಿಗೆ, ಒಂಭತ್ತು ದೀಪಗಳ ಆರತಿ ತಟ್ಟೆ, ಲಿಂಗದಕಾಯಿ, ಎರಡು ಚಮಚ, ಎರಡು ಬಟ್ಟಲು ಹಾಗೂ ಸಿಸಿ ಕ್ಯಾಮರಾ ಕಳ್ಳತನ ಮಾಡಲಾಗಿದೆ ಎಂದು ದೂರಿನಲ್ಲಿ ವಿವರಿಸಲಾಗಿದೆ.

ಮುಂದಿನ ತಿಂಗಳು ಬರಲಿರುವ ದೇವಿ ಉತ್ಸವದ ಕುರಿತು ಕಮಿಟಿಯವರು ನಿನ್ನೆ ರಾತ್ರಿ 10 ಗಂಟೆವರೆಗೂ ಚರ್ಚೆ ನಡೆಸಿ, ನಂತರ ಮನೆಗೆ ತೆರಳಿದ್ದೆವು. ರಾತ್ರಿ 11 ರಿಂದ ಬೆಳಿಗ್ಗೆ 6 ಗಂಟೆಯೊಳಗೆ ಈ ಕಳ್ಳತನ ನಡೆದಿರಬಹುದು ಎಂದು ದೂರಿನಲ್ಲಿ ತಿಳಿಸಲಾಗಿದೆ. ಬೆಳಿಗ್ಗೆ ಅರ್ಚಕ ಪೂಜೆ ಮಾಡಲು ಬಂದಾಗ ದೇವಸ್ಥಾನದಲ್ಲಿ ಕಳ್ಳತನ ನಡೆದಿರುವ ಬಗ್ಗೆ ತಿಳಿದಿದೆ.


## ಭಾವಪೂರ್ಣ ಶ್ರದ್ಧಾಂಜಲಿ



ಶ್ರೀ ಸಿದ್ಧಿವಿನಾಯಕ ಸಾಂಸ್ಕೃತಿಕ ಸಂಸ್ಥೆಯ ಮಾಜಿ ಅಧ್ಯಕ್ಷರು,
ಹಾಲಿ ನಿರ್ದೇಶಕರೂ ಆಗಿದ್ದ

**ಶ್ರೀ ಪಿ. ನಾಗಪ್ಪ**

ಕಂಟ್ರಾಕ್ಟರ್ ಇವರು ದಿನಾಂಕ : 9.12.2024ರ ಸೋಮವಾರ ನಿಧನರಾಗಿದ್ದು, ಅವರಿಗೆ ನಮ್ಮೆಲರ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸುತ್ತಾ ಭಗವಂತನು ಅವರ ಆತ್ಮಕ್ಕೆ ಚಿರ ಶಾಂತಿ ನೀಡಲಿ, ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿ ಅವರ ಕುಟುಂಬ ವರ್ಗಕ್ಕೆ ನೀಡಲಿ ಎಂದು ಪ್ರಾರ್ಥಿಸುತ್ತೇವೆ.

ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು ಹಾಗೂ ಶಾಲೆಗಳ ಸಿಬ್ಬಂಧಿ ವರ್ಗದವರು.

**ಶ್ರೀ ಸಿದ್ಧಿವಿನಾಯಕ ಸಾಂಸ್ಕೃತಿಕ ಸಂಘ (ರಿ)**
**ವಿನೋಬನಗರ, ದಾವಣಗೆರೆ. ವೈ.ಬಿ.ಕೆ.ಬಿ.ಹಿ.ಪ್ರಾ. ಶಾಲೆ,**
**ವೈಬಿಎಸ್‌ಜಿ ಪ್ರೌಢ ಶಾಲೆ ಹಾಗೂ ನರ್ಸರಿ ಶಾಲೆ.**


# ಎಸ್.ಎಂ. ಕೃಷ್ಣ, ಐಟಿ - ಬಿಟಿ ಹೆಬ್ಬಾಗಿಲ ನಿರ್ಮಾತೃ

## ಹೆಚ್. ಆಂಜನೇಯ ಶ್ಲಾಘನೆ

ಚಿತ್ರದುರ್ಗ, ಡಿ.10 - ರಾಜ್ಯ ರಾಷ್ಟ್ರ ರಾಜಕಾರಣ ದಲ್ಲಿ ಎಲ್ಲಾ ಅತ್ಯುನ್ನತ ಹುದ್ದೆಗಳನ್ನು ಅಲಂಕರಿಸಿ, ಬೆರಳೆಣಿಕೆಯ ರಾಜಕಾರಣಿಗಳಲ್ಲಿ ಎಸ್.ಕೆ.ಕೃಷ್ಣ ಪ್ರಮುಖರು. ಅವರ ಅಗಲಿಕೆ ನಾಡಿಗೆ ಬಹುದೊಡ್ಡ ನಷ್ಟವನ್ನುಂಟು ಮಾಡಿದೆ ಎಂದು ಮಾಜಿ ಸಚಿವ ಎಚ್.ಆಂಜನೇಯ ಸಂತಾಪ ವ್ಯಕ್ತಪಡಿಸಿದ್ದಾರೆ.

ಇಡೀ ಜಗತ್ತು ಕರ್ನಾಟಕದ ಕಡೆ ತಿರುಗಿ ನೋಡುವ ರೀತಿ ಐಟಿ-ಬಿಟಿ ಮೂಲಕ ಬೆಂಗ ಳೂರನ್ನು ಕಟ್ಟಿದ ರೀತಿ, ಜೊತೆಗೆ ಉದ್ಯೋಗ ಸೃಷ್ಟಿಗೆ ಅಗತ್ಯ ಯೋಜನೆ ರೂಪಿಸಿದ ದೂರ ದೃಷ್ಟಿಯ ರಾಜಕಾರಣಿ. ಅವರು ಬೆಂಗಳೂರನ್ನು ಐಟಿ-ಬಿಟಿ ಹೆಬ್ಬಾಗಿಲಾಗಿಸುವಲ್ಲಿ ಶ್ರಮಿಸಿದ್ದು ವಿಶೇಷ.

ಸೌಮ್ಯ ರಾಜಕಾರಣಿ ಕೃಷ್ಣ ಅಗಲಿಕೆ ತೀವ್ರ ನೋವುಂಟು ಮಾಡಿದ್ದು, ಅತ್ಯುತ್ತಮ ಹಿರಿಯ ಸಂಸದೀಯ ಪಟು ಆಗಿದ್ದರು. ಸಮಾಜವಾದಿ ಹಿನ್ನೆಲೆಯಿಂದ ಬಂದ ಎಸ್.ಎಂ.ಕೃಷ್ಣ, ಇಂದಿರಾ ಗಾಂಧಿ ಅವರ ಜನಪರ ಆಡಳಿತಕ್ಕೆ ಆಕರ್ಷಿತರಾಗಿ ಕಾಂಗ್ರೆಸ್ ಸೇರಿ ಲೋಕಸಭೆ, ವಿಧಾನಸಭೆ ಸದ ಸ್ಯರು, ಸ್ಪೀಕರ್, ಮಂತ್ರಿ, ಮುಖ್ಯಮಂತ್ರಿ, ರಾಜ್ಯ ಪಾಲ, ಕೇಂದ್ರ ಸಚಿವರು ಸೇರಿ ರಾಷ್ಟ್ರದ ಬಹು ತೇಕ ಎಲ್ಲ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮರ್ಥ ವಾಗಿ ನಿಭಾಯಿಸಿದ ಖ್ಯಾತಿ ಅವರಿಗೆ ಸಲ್ಲುತ್ತದೆ.

ಬೆಂಗಳೂರನ್ನು ಐಟಿ-ಬಿಟಿಯ ಹೆಬ್ಬಾಗಿಲು ಮಾಡಿದ ಕೀರ್ತಿ ಜತೆಗೆ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ, ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಹೀಗೆ ಅನೇಕ ಜನಪರ ಕಾರ್ಯಕ್ರಮಗಳನ್ನು ಕೊಟ್ಟ ಮಹಾನ್ ನಾಯಕ ಕೃಷ್ಣ ಅವರಿಗೆ ಸಲ್ಲುತ್ತದೆ.

ಕೆಂಗಲ್ ಹನುಮಂತಯ್ಯ ವಿಧಾನಸಭೆ ಕಟ್ಟಿದರೆ, ಎಸ್.ಎಂ.ಕೃಷ್ಣ ವಿಕಾಸಸೌಧ ನಿರ್ಮಾಣ ಮಾಡುವ ಮೂಲಕ ದೂರದೃಷ್ಟಿಯ ರಾಜಕಾರಣಿ ಎಂಬುದನ್ನು ತಮ್ಮ ಆಡಳಿತದ ಮೂಲಕ ದೃಢಪಡಿಸಿದ ರಾಜಕಾರಣಿ.

ಕಾಡುಗಳ್ಳ ವೀರಪ್ಪನ್ ನಾಡಿನ ವರನಟ ಡಾ.ರಾಜಕುಮಾರ್ ಅವರನ್ನು ಅಪಹರಣ ಮಾಡಿದ ಸಂದರ್ಭದಲ್ಲಿ ಸವಾಲನ್ನು ಮೆಟ್ಟಿ ನಿಂತು ಕನ್ನಡದ ಕಣ್ಮಣಿಯನ್ನು ನಾಡಿಗೆ ಕರೆ ತಂದಿದ್ದು ಇತಿಹಾಸದ ಪುಟಗಳಲ್ಲಿ ದಾಖಲಾಗುವಂತಹ ಘಟನೆ. ಇಂತಹ ಅಪರೂಪದ ರಾಜಕಾರಣಿಯ ಮಾರ್ಗದರ್ಶನ ನಾಡಿಗೆ ಇನ್ನಷ್ಟು ಕಾಲ ಬೇಕಿತ್ತು ಎಂದು ಆಂಜನೇಯ ಅವರು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

ದಾವಣಗೆರೆ, ಡಿ.10- ಪ್ರಸಕ್ತ ಸಾಲಿನ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ ಯೋಜನೆಯಡಿ ಬಿ.ಎಡ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗೆ ದೂ.ಸಂ: 08192-250022 ಸಂಪರ್ಕಿಸಬಹುದು.

# ಕೃಷ್ಣ ನಿಧನಕ್ಕೆ ಕೂಲಿ ಕಾರ್ಮಿಕರ ಶೋಕ

ದಾವಣಗೆರೆ, ಡಿ.10- ರಾಜ್ಯದ 10ನೇ ಮುಖ್ಯಮಂತ್ರಿ ಹಾಗೂ ಕೇಂದ್ರದ ವಿದೇಶಾಂಗ ಸಚಿವ ಎಸ್.ಎಂ. ಕೃಷ್ಣ ಅವರು ವಿಧಿವಶರಾಗಿರುತ್ತಾರೆ.

ಕೃಷ್ಣ ನಿಧನದ ಸುದ್ದಿ ಕೇಳಿ ಟೈಲ್ಸ್, ಗ್ರಾನೈಟ್, ಮಾರ್ಬಲ್, ಕೂಲಿ ಕಾರ್ಮಿಕರ ಸಂಘದಿಂದ ಅಧ್ಯಕ್ಷ ಮುರುಗನ್ ನೇತೃತ್ವದಲ್ಲಿ ಒಂದು ನಿಮಿಷ ಮೌನ ಆಚರಣೆ ಮಾಡಿ ಸಂತಾಪ ಸೂಚಿಸಲಾಯಿತು. ಈ ಕಾರ್ಯಕ್ರಮದಲ್ಲಿ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಮಿಕರು ಉಪಸ್ಥಿತರಿದ್ದರು.

# ಸರ್ಕಾರಿ ರಜೆ ಘೋಷಣೆ ಮೂರು ದಿನ ಶೋಕಾಚರಣೆ

**(1ನೇ ಪುಟದಿಂದ)** ಮುಖ್ಯಮಂತ್ರಿಯಾಗಿ ರಾಜ್ಯದ ಅಭಿವೃದ್ಧಿಯಿಂದ ಜನಪ್ರಿಯತೆಯನ್ನು ಗಳಿಸಿದ್ದರು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಶೋಕ ಸಂದೇಶದಲ್ಲಿ ಸ್ಮರಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಸಂತಾಪ ಸಂದೇಶದಲ್ಲಿ, ಕೃಷ್ಣ ಯಾವಾಗಲೂ ಇತರರ ಜೀವನ ಸುಧಾರಣೆಗೆ ದಣಿವರಿಯದಂತೆ ಶ್ರಮಿಸಿದವರು, ಕರ್ನಾಟಕದ ಮುಖ್ಯಮಂತ್ರಿಯಾಗಿ ಆಡಳಿತ ವೇಳೆ ಮೂಲಸೌಕರ್ಯ ವೃದ್ಧಿಗೆ ಹೆಚ್ಚು ಒತ್ತು ನೀಡಿದ ಅವರು, ಒಬ್ಬ ಓದುಗ ಹಾಗೂ ಚಿಂತನಶೀಲರಾಗಿ ಗುರುತಿಸಿಕೊಂಡಿದ್ದರು, ಅವರೊಂದಿಗೆ ಸಂವಹನ ನಡೆಸುವ ಹಲವು ಅವಕಾಶಗಳು ತಮಗೆ ದೊರೆತಿದ್ದವು ಎಂದು ಸ್ಮರಿಸಿಕೊಂಡಿದ್ದಾರೆ.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಸಂತಾಪ ಸೂಚಿಸಿ, ಕೃಷ್ಣ ಅವರು ಸಮಕಾಲೀನ ರಾಜಕಾರಣಿ ಯಾಗಿದ್ದು, ಹಲವು ಸುಧಾರಣಾ ವಿಚಾರಗಳಲ್ಲಿ ಇಬ್ಬರಲ್ಲೂ ಸಾಮ್ಯತೆ ಇತ್ತು ಎಂದು ಸ್ಮರಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಶೋಕ ಸಂದೇಶದಲ್ಲಿ, ಕೃಷ್ಣ ಅವರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ ಮತ್ತು ಅಧ್ಯಯನಶೀಲ ಪ್ರವೃತ್ತಿ ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿಯಾಗಿದ್ದು, ಅವರ ಅಗಲಿಕೆಯಿಂದ ನೊಂದಿರುವ ಅವರ ಕುಟುಂಬವರ್ಗ ಮತ್ತು ಅಭಿಮಾನಿಗಳ ದುಃಖದಲ್ಲಿ ನಾನೂ ಭಾಗಿಯಾಗಿದ್ದು, ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಭಗವಂತನಲ್ಲಿ ಕೋರುವುದಾಗಿ ತಿಳಿಸಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂತಾಪ ಸಂದೇಶದಲ್ಲಿ, ನನ್ನ ರಾಜಕೀಯ ಬದುಕಿನ ಮಾರ್ಗದರ್ಶಕರಾಗಿದ್ದ ಎಸ್.ಎಂ.ಕೃಷ್ಣ ಅವರ ಅಗಲಿಕೆ ಅಪಾರ ನೋವು ತಂದಿದೆ, ಕರ್ನಾಟಕ ರಾಜಕೀಯ ರಂಗದ ಧ್ರುವ ನಕ್ಷತ್ರ ಕಳಚಿ ಬಿದ್ದಿದೆ, ಅಂತಾರಾಷ್ಟ್ರೀಯ ಖ್ಯಾತಿಯ ರಾಜಕೀಯ ಮುತ್ಸದ್ದಿ, ಬೆಂಗಳೂರಿಗೆ ಸಿಲಿಕಾನ್ ಸಿಟಿ ಖ್ಯಾತಿ ತಂದ ಮಾಜಿ ಮುಖ್ಯಮಂತ್ರಿಗಳು, ಮಾಜಿ ರಾಜ್ಯಪಾಲರು, ಕೇಂದ್ರದ ಮಾಜಿ ಸಚಿವರೂ ಆಗಿ ಅವರು ಸಲ್ಲಿಸಿದ ಸೇವೆ ಸ್ಮರಣೀಯ ಎಂದು ಕಂಬನಿ ಮಿಡಿದಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಂತಾಪ ಸೂಚಿಸಿ, ಬಿಜೆಪಿಯ ಹಿರಿಯ ಮುಖಂಡ ಮತ್ತು ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ನಿಧನದಿಂದ ಪಕ್ಷ ಒಬ್ಬ ಮಾರ್ಗದರ್ಶಕರನ್ನು ಕಳೆದುಕೊಂಡಂತಾಗಿದೆ, ಬೆಂಗಳೂರನ್ನು ಐ.ಟಿ-ಬಿ.ಟಿ. ಹಬ್ ಆಗಿ ಪರಿವರ್ತಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ಸ್ಮರಿಸಿದ್ದಾರೆ.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಶೋಕ ಸಂದೇಶದಲ್ಲಿ, ರಾಜ್ಯ ವಿಧಾನಸಭಾಧ್ಯಕ್ಷರು, ಉಪಮುಖ್ಯಮಂತ್ರಿಗಳು, ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ರಾಜ್ಯಪಾಲರೂ ಸೇರಿದಂತೆ ಅನೇಕ ಉನ್ನತ ಹುದ್ದೆಗಳಲ್ಲಿ ದಕ್ಷತೆಯಿಂದ ಕರ್ತವ್ಯ ನಿರ್ವಹಿಸಿ ರಾಜ್ಯಕ್ಕೆ, ದೇಶಕ್ಕೆ ತಮ್ಮದೇ ಆದ ಅನುಪಮ ಕೊಡುಗೆ ನೀಡಿದ್ದ ಹಿರಿಯರು, ಮುತ್ಸದ್ದಿಗಳಾದ ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ಕೇಳಿ ಬಹಳ ದುಃಖವುಂಟಾಯಿತು, ವೈಯಕ್ತಿಕವಾಗಿ ನನಗೆ ಅವರ ಅಗಲಿಕೆ ಬಹಳ ದುಃಖ ಉಂಟು ಮಾಡಿದೆ, ಆ ಚೇತನಕ್ಕೆ ಚಿರಶಾಂತಿ ಸಿಗಲಿ ಹಾಗೂ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಕ್ಕೆ, ಅಭಿಮಾನಿಗಳಿಗೆ ಕರುಣಿಸಲಿ ಎಂದು ಪ್ರಾರ್ಥಿಸಿದ್ದಾರೆ.

# ಬೇರೊಬ್ಬರ ಹಕ್ಕಿಗೆ ಚ್ಯುತಿ ಬಾರದಂತೆ ಬದುಕುವುದೇ ಮಾನವ ಹಕ್ಕು ಪಾಲನೆ



ದಾವಣಗೆರೆ, ಡಿ.10- ಮನುಷ್ಯ ಹುಟ್ಟಿನಿಂದ ಸಾಯುವವರೆಗೂ ಬೇರೊಬ್ಬರ ಹಕ್ಕಿಗೆ ಚ್ಯುತಿ ಉಂಟುಮಾಡದೇ, ಗೌರವದಿಂದ ಬದುಕುವುದೇ ಮಾನವ ಹಕ್ಕು ಪಾಲನೆ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ.ಎನ್ ಹೆಗಡೆ ಹೇಳಿದರು.

ಮಂಗಳವಾರ ನಗರದ ಆರ್.ಎಲ್. ಕಾನೂನು ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಅಂತರರಾಷ್ಟ್ರೀಯ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾನವ ಹಕ್ಕುಗಳ ದಿನಾಚರಣೆಯ ಪ್ರತಿಜ್ಞಾ ವಿಧಿ ಬೋಧಿಸಿ, ಅವರು ಮಾತನಾಡಿ ದರು.

ಎರಡನೆ ಮಹಾಯುದ್ಧದ ಸಂದರ್ಭದಲ್ಲಿ ಜಾಗತಿಕವಾಗಿ ನಡೆದ ಸಾಮೂಹಿಕ ಹತ್ಯೆ, ಅನಾಗರಿಕ ಕೃತ್ಯಗಳ ಪರಿಣಾಮವಾಗಿ 1948 ರ ಡಿಸೆಂಬರ್ 10 ರಲ್ಲಿ ವಿಶ್ವಸಂಸ್ಥೆ ಮಾನವ ಹಕ್ಕುಗಳ ರಕ್ಷಣೆಗಾಗಿ ನೀತಿಯನ್ನು ಘೋಷಣೆ ಮಾಡಿತು. ಅಂದಿನಿಂದ ಈವರೆಗೂ ಮಾನವ ಹಕ್ಕುಗಳ ರಕ್ಷಣೆಯ ವಿಷಯ ಹಲವು ಮಜಲುಗಳನ್ನು ಕಂಡಿದೆ. ಆದರೂ ಮಾನವ ಹಕ್ಕುಗಳ ಉಲ್ಲಂಘನೆ ನಿತ್ಯ ನಡೆಯುತ್ತಿರುವುದು ಬೇಸರದ ಸಂಗತಿಯಾಗಿದೆ ಎಂದರು.

ಕಷ್ಟಗಳಿಗೆ ಸ್ಪಂದಿಸದಿರುವುದು ಕೂಡ ಹಕ್ಕುಗಳ ಉಲ್ಲಂಘನೆಯಾಗುತ್ತದೆ. ನಮ್ಮ ಸುತ್ತಮುತ್ತಲು ಇಂತಹ ಉಲ್ಲಂಘನೆ ಕಂಡುಬಂದಾಗ, ಇದರ ವಿರುದ್ಧ ನಾವು ಧ್ವನಿ ಎತ್ತಬೇಕು. ಇಂತಹ ಕೃತ್ಯಗಳನ್ನು ತಡೆಯುವ ಮೂಲಕ ಹಕ್ಕುಗಳ ರಕ್ಷಣೆಗೆ ಮುಂದಾಗಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ್ ಮಾತ ನಾಡಿ, ಬಾಲ ಕಾರ್ಮಿಕ ಮತ್ತು ಬಾಲ್ಯವಿವಾಹದಂತಹ ಪದ್ಧತಿಗಳು ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತದೆ ಎಂದರು.

ಸಾರ್ವಜನಿಕರು ನೈತಿಕತೆಯಿಂದ ನಡೆದುಕೊಳ್ಳಬೇಕು. ಬಾಲಕಾರ್ಮಿಕ ಪದ್ಧತಿ, ಜೀತಪದ್ಧತಿ, ಮಾನವ ಕಳ್ಳಸಾಗಣೆ, ಲೈಂಗಿಕ ಕಿರುಕುಳ, ಹೆಚ್‌ಐವಿ ಸೋಂಕಿತರಿಗೆ ಮಾಡಲಾಗುವ ತಾರತಮ್ಯ ಇವೆಲ್ಲವೂ ಮಾನವ ಹಕ್ಕುಗಳ ಉಲ್ಲಂಘನೆಯೇ ಆಗಿದೆ. ಮಾನವ ಹಕ್ಕುಗಳ ಉಲ್ಲಂಘನೆಗೆ ಸಂಬಂಧಿಸಿದ ಹೆಚ್ಚಿನ ಪ್ರಕರಣಗಳು ಸಾಮಾನ್ಯವಾಗಿ ಪೊಲೀಸ್ ಇಲಾಖೆ ವಿರುದ್ಧವೇ ದಾಖಲಾಗುತ್ತವೆ. ಇತರರೊಂದಿಗೆ ಅಗೌರವವಾಗಿ, ಮನುಷ್ಯತ್ವ ಮರೆತು ಕ್ರೂರ ರೀತಿಯಲ್ಲಿ ವರ್ತಿಸುವುದು ಸರಿಯಲ್ಲ. ಮಾನವರಾದ ಎಲ್ಲರನ್ನೂ ಕಾನೂನು ಸಮಾನವಾಗಿಯೇ ನೋಡುತ್ತದೆ ಎಂದರು.

ಮಾನವ ಹಕ್ಕುಗಳಿಗೆ ಸುದೀರ್ಘವಾದ ಇತಿಹಾಸವಿದೆ, ಕ್ರಿಸ್ತಪೂರ್ವದಿಂದಲೂ ಮಾನವ ಹಕ್ಕುಗಳಿಗಾಗಿ ಹೋರಾಟವನ್ನು ನಡೆಸಲಾಗಿದೆ. ಆಳುವವರ ಮತ್ತು ಆಳಿಸಿಕೊಳ್ಳುವವರ ನಡುವಿನ ಸಂಘರ್ಷದಿಂದ ಮಾನವ ಹಕ್ಕುಗಳು ಹುಟ್ಟಿಕೊಂಡಿವೆ. ಪ್ರಸ್ತುತ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲೂ ಮಾನವ ಹಕ್ಕುಗಳ ಉಲ್ಲಂಘನೆ ಯಾಗುತ್ತಿರುವುದು ಬೇಸರದ ಸಂಗತಿ ಎಂದು ತಿಳಿಸಿದರು.

ವಕೀಲರಾದ ಎಲ್.ಹೆಚ್. ಅರುಣ ಕುಮಾರ್ ಮಾತನಾಡಿ, ಮನುಷ್ಯ, ಮನುಷ್ಯನನ್ನು ಗೌರವಿಸಬೇಕು. ಮಾನವ ದೇವರಾಗುವುದು ಸುಲಭ. ಆದರೆ ಮನುಷ್ಯ ಮನುಷ್ಯನಾಗುವುದು ಕಷ್ಟವಾಗಿದೆ. ಈ ಮನಸ್ಥಿತಿ ಬದಲಾಗಬೇಕು. ಎಲ್ಲರೂ ಮಾನವ ಹಕ್ಕುಗಳನ್ನು ಗೌರವಿಸಬೇಕು. ಮಾನವ ಹಕ್ಕುಗಳು ಅನೇಕ ಉದ್ದೇಶಗಳನ್ನು ಹೊಂದಿದೆ. ಮಾನವ ಪ್ರಪಂಚದಲ್ಲಿ ಮುಕ್ತವಾಗಿ ಜೀವಿಸುವ ಮತ್ತು ಭೇದ-ಭಾವವಿಲ್ಲದೇ ಬದುಕುವ ಹಕ್ಕು ಹೊಂದಿದ್ದಾರೆ. ಯಾರ ಗುಲಾಮಗಿರಿಯಲ್ಲೂ ಇರದೇ, ಸ್ವತಂತ್ರರಾಗಿ ಜೀವಿಸಬೇಕು. ಹಿಂಸೆ ಮತ್ತು ಅಮಾನವೀಯವಾಗಿ ಬೇರೊಬ್ಬರಿಂದ ಶಿಕ್ಷೆಗೆ ಒಳಗಾಗದಂತೆ ಜೀವಿಸುವ ಹಕ್ಕುಗಳು ಸೇರಿದಂತೆ, ವಿವಿಧ ಉದ್ದೇಶಗಳನ್ನು ಇದು ಹೊಂದಿದೆ ಎಂದು ತಿಳಿಸಿದರು.

ಆರ್.ಎಲ್ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ಜಿ.ಎಸ್. ಯತೀಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಧಾರವಾಡ ಹೊಸತು ಮಾಸ ಪತ್ರಿಕೆಯ ಸಂಪಾದಕರಾದ ಡಾ. ಸಿದ್ದನಗೌಡ ಪಾಟೀಲ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ, ವಕೀಲರಾದ ಹನುಮಂತಪ್ಪ, ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಗೀತಾ ಸಾರ ...

ಹಿಂದೂಗಳ ಪವಿತ್ರ ಗ್ರಂಥ ಭಗವದ್ಗೀತೆ
ಕುರುಕ್ಷೇತ್ರದಿ ಕೃಷ್ಣನ ಮುತ್ತಿನಂತ ಗೀತೆ
ಬದುಕಿನ ಪ್ರತಿ ಪ್ರಶ್ನೆಗೆ ಉತ್ತರ
ಪ್ರತಿ ಕಷ್ಟಕು ಪರಿಹಾರ

ಅರ್ಜುನ ಶಸ್ತ್ರ ಕೆಳಗಿಟ್ಟಾಗ ಬಂದ ಗೀತೆ
ಕೃಷ್ಣ ಧೈರ್ಯ ತುಂಬುವ ಗೀತೆ
ಲೋಕೋದ್ಧಾರಕೆ ಕೊಟ್ಟ ಗೀತಾಮೃತ
ವೇದ ಉಪನಿಷತ್ ಸಾರ ಈ ಅಮೃತ

ದೇಹವು ಅಸ್ಥಿರ ಆತ್ಮ ನಿತ್ಯನು
ಅಂಜದಿರು ದುಃಖಿಸದಿರು ಎಂದನು
ಆದದ್ದೆಲ್ಲ ಒಳ್ಳೆಯದೇ ಆಗಿದೆ
ಆಗುವುದೆಲ್ಲ ಒಳ್ಳೆಯದಕ್ಕೆ ಆಗಲಿದೆ

ಜೀವಿಸು ಕಷ್ಟದಿ ಕುಗ್ಗದೆ ಸೌಖ್ಯದಿ ಹಿಗ್ಗದೆ
ಮಾಡು ಕರ್ಮ ಫಲಾಪೇಕ್ಷೆ ಇಲ್ಲದೆ
ಸಕಲ ಜೀವ ಜಡದಲ್ಲಿ ತಾನಿರುವೆನೆಂದು
ತನ್ನನೇ ನಂಬಿ ಕರ್ಮ
ಮಾಡೆಂದು

ಸಂಸಾರದಲ್ಲಿದ್ದು ಅಂಟಿಕೊಳ್ಳದಂತೆ
ನಡೆಯಬೇಕು ಯೋಗಿಯಂತೆ
ನೀರಿನಲ್ಲಿ ಇರುವ ಕಮಲದಂತೆ
ಇರಬೇಕು ಜ್ಞಾನಿಯಂತೆ

ನಿನ್ನೆ ಬೇರಾರದ್ದೋ ಆಗಿತ್ತು
ನಾಳೆ ಇನ್ನಾರದ್ದೋ ಆಗಲಿದೆ
ಇಂದು ನೀ ಸತ್ಕರ್ಮಿಯಾಗಿರು
ಪರಿವರ್ತನೆ ಜಗದ ನಿಯಮ ತಿಳಿ

ಚಿತ್ತದಲ್ಲಿ ಭಕ್ತಿ ಇಡು
ಎಲ್ಲವನ್ನೂ ಕೃಷ್ಣನಿಗೆ ಅರ್ಪಿಸು
ಭಕ್ತಿಯಿಂದ ಕೃಷ್ಣಾ ಎನಲು
ಮುಕ್ತಿಯ ನೀಡುವನು ಕೈ ಬಿಡದೆ

ಕಾಲ ಸರಿಯುವುದು ಮನ ಶಾಂತ ಇರಲಿ
ದೇಹಕೆ ಮಾತ್ರ ಜನ್ಮಪುನರಪಿ
ಹೋಗುವಾಗ ಬರುವಾಗ ಒಂಟಿ
ಯಾರೂ ಬರಲಾರರು ಅಂಟಿ

**- ಕೋಮಲ ವಿ. ಕುಮಾರ್,**
ದಾವಣಗೆರೆ.

# ದೆಹಲಿಯಲ್ಲಿ ಆಟೋ ಚಾಲಕರಿಗೆ 10 ಲಕ್ಷ ರೂ. ವಿಮೆ: ಕೇಜ್ರಿವಾಲ್

ದೆಹಲಿ, ಡಿ.10- ದೆಹಲಿಯಲ್ಲಿ ಮತ್ತೆ ಆಪ್ ಅಧಿಕಾರಕ್ಕೆ ಬಂದಲ್ಲಿ, ನಗರದ ಆಟೋ ಚಾಲಕರಿಗೆ 10 ಲಕ್ಷ ರೂಪಾಯಿ ವಿಮೆ ಕೊಡಿಸುವುದಾಗಿ ಆಮ್ ಆದ್ಮಿ ಪಕ್ಷದ ಮುಖಂಡ ಕೇಜ್ರಿವಾಲ್ ಭರವಸೆ ನೀಡಿದ್ದಾರೆ.

ಇದಷ್ಟೇ ಅಲ್ಲದೇ ಆಟೋ ಚಾಲಕರ ಹೆಣ್ಣುಮಕ್ಕಳ ವಿವಾಹಕ್ಕಾಗಿ 1 ಲಕ್ಷ ರೂಪಾಯಿ ನೆರವು ನೀಡುವುದಾಗಿ ಕೇಜ್ರಿವಾಲ್ ಘೋಷಿಸಿದ್ದಾರೆ.

ದೆಹಲಿ ವಿಧಾನಸಭಾ ಚುನಾವಣೆ ತಯಾರಿಯಲ್ಲಿರುವ ಆಮ್ ಆದ್ಮಿ ಪಕ್ಷದ ಮುಖಂಡ ಕೇಜ್ರಿವಾಲ್ ಆಟೋ ಚಾಲಕರೊಂದಿಗೆ ಚರ್ಚೆ ನಡೆಸಿದರು. ಕೊಂಡ್ಲಿ ಕ್ಷೇತ್ರದಲ್ಲಿ ಆಟೋ ಚಾಲಕನೋರ್ವನ ಕುಟುಂಬ ಸದಸ್ಯರೊಟ್ಟಿಗೆ ಊಟ ಮಾಡಿರುವ ಕೇಜ್ರಿವಾಲ್, ಆಟೋ ಚಾಲಕ ಸಮುದಾಯಕ್ಕೆ ನೆರವಾಗುವ ಹಲವು ಘೋಷಣೆಗಳನ್ನು ಮಾಡಿದ್ದಾರೆ. ಆಟೋ ಚಾಲಕರಿಗೆ ವರ್ಷಕ್ಕೆ 2 ಬಾರಿ 2,500 ರೂಪಾಯಿಗಳ ಸಮವಸ್ತ್ರ ಭತ್ಯೆ, ಚಾಲಕರ ಮಕ್ಕಳಿಗೆ ಉಚಿತ ಕೋಚಿಂಗ್ ಹಾಗೂ ಪೂಚೋ ಆಪ್ ಗೆ ಮತ್ತೆ ಚಾಲನೆ ನೀಡುವ ಭರವಸೆಗಳನ್ನೂ ಕೇಜ್ರಿವಾಲ್ ಆಟೋ ಡ್ರೈವರ್ಸ್ ಸೆ ಚರ್ಚಾ ಕಾರ್ಯಕ್ರಮದಲ್ಲಿ ಘೋಷಿಸಿದ್ದಾರೆ.

# ನರ್ಸ್‌ಗಳು ಸೇರಿ 1400 ಜನರ ವಿರುದ್ಧ ಪ್ರಕರಣ

**(1ನೇ ಪುಟದಿಂದ)** ಕುವೈತ್‌ನಿಂದ ತಾಯ್ನಾಡಿಗೆ (ಕೇರಳ) ವಾಪಸ್ ಬಂದಿದ್ದಾರೆ. ಕೆಲವರು ಮತ್ತೆ ವಿದೇಶಗಳಿಗೂ ವಲಸೆ ಹೋಗಿದ್ದಾರೆ. ಇದರಿಂದಾಗಿ ಕುವೈತ್ ಬ್ಯಾಂಕ್ ಕೆಎಸ್‌ಸಿಪಿ (ಕುವೈತ್ ಸಾರ್ವಜನಿಕ ಷೇರುದಾರ ಕಂಪನಿ) ಇತ್ತೀಚೆಗೆ ಕೇರಳ ಪೊಲೀಸರಿಗೆ ದೂರು ನೀಡಿದ್ದು, ಅದರನ್ವಯ ರಾಜ್ಯದಲ್ಲಿ 10 ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕುವೈತ್‌ನ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದ ದಾದಿಯರು ಕೋವಿಡ್ ಸಂದರ್ಭದಲ್ಲಿ ಹೆಚ್ಚು ಸಾಲವನ್ನು ಪಡೆದಿದ್ದಾರೆ ಎಂದು ಅಧಿಕಾರಿ ಹೇಳಿದ್ದಾರೆ.

# ಮಾಜಿ ಸಿಎಂ ಎಸ್.ಎಂ. ಕೃಷ್ಣ ವಿಧಿವಶ

**(1ನೇ ಪುಟದಿಂದ)** ಸೋಮನಹಳ್ಳಿಯಲ್ಲಿ ಎಸ್.ಸಿ.ಮಲ್ಲಯ್ಯ ಮತ್ತು ತಾಯಮ್ಮ ದಂಪತಿಯ ಪುತ್ರರಾಗಿ ಜನಿಸಿದ ಎಸ್.ಎಂ. ಕೃಷ್ಣ ಅವರು ಪ್ರಾಥಮಿಕ ಶಿಕ್ಷಣವನ್ನು ಮದ್ದೂರಿನಲ್ಲಿ, ನಂತರ ಪದವಿ ಶಿಕ್ಷಣವನ್ನು ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಪಡೆದರು.

ನಂತರ ಬೆಂಗಳೂರಿನ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಪದವಿ ಪಡೆದು ಅಮೆರಿಕದ ಟೆಕ್ಸಾಸ್‌ನಲ್ಲಿ ಉನ್ನತ ವ್ಯಾಸಂಗ ಮುಗಿಸಿ, ಭಾರತಕ್ಕೆ ಹಿಂತಿರುಗಿ ರೇಣುಕಾಚಾರ್ಯ ಕಾಲೇಜಿನಲ್ಲಿ ಕಾನೂನು ಉಪನ್ಯಾಸಕರಾಗಿ ಕೆಲವು ಕಾಲ ಸೇವೆ ಸಲ್ಲಿಸಿದರು.

1962ರಲ್ಲಿ ರಾಜಕೀಯ ಬದುಕು ಆರಂಭಿಸಿದ ಅವರು, ಮದ್ದೂರು ವಿಧಾನಸಭಾ ಕ್ಷೇತ್ರದಿಂದ ಪಕ್ಷೇತರರಾಗಿ ವಿಧಾನಸಭೆ ಪ್ರವೇಶಿಸಿದರು.

1968ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿ, 1971ರಲ್ಲಿ ಕಾಂಗ್ರೆಸ್‌ನಿಂದ ಕಣಕ್ಕಿಳಿದು ಮರು ಆಯ್ಕೆಗೊಂಡರು.

1972ರಲ್ಲಿ ವಿಧಾನ ಪರಿಷತ್ ಸದಸ್ಯರಾಗಿ ವಾಣಿಜ್ಯ ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ ಸೇವೆ ಸಲ್ಲಿಸಿ, ನಂತರ ರಾಷ್ಟ್ರ ರಾಜಕಾರಣಕ್ಕೆ ತೆರಳಿ ಇಂದಿರಾ ಗಾಂಧಿ ಆಡಳಿತದಲ್ಲಿ ಕೈಗಾರಿಕಾ ರಾಜ್ಯ ಸಚಿವರಾಗಿ ಸೇವೆ ಸಲ್ಲಿಸಿದರು.

ರಾಷ್ಟ್ರದ ನಾಲ್ಕೂ ಸದನಗಳ ಸದಸ್ಯರಾಗಿ ಕಾರ್ಯ ನಿರ್ವಹಿಸಿದ ಕೆಲವೇ ವ್ಯಕ್ತಿಗಳಲ್ಲಿ ಎಸ್.ಎಂ.ಕೃಷ್ಣ ಒಬ್ಬರಾಗಿದ್ದು, ವಿಧಾನಸಭೆ, ವಿಧಾನ ಪರಿಷತ್, ಲೋಕಸಭೆ ಹಾಗೂ ರಾಜ್ಯಸಭೆಯ ಸದಸ್ಯರಾಗಿದ್ದರು.

ಮುಖ್ಯಮಂತ್ರಿ ದೇವರಾಜ ಅರಸ್ ಸಂಪುಟದಲ್ಲಿ ಸಚಿವರಾಗಿ, ಎಸ್.ಬಂಗಾರಪ್ಪ ಆಡಳಿತಾವಧಿಯಲ್ಲಿ ವಿಧಾನಸಭಾಧ್ಯಕ್ಷರಾಗಿ, ವೀರಪ್ಪ ಮೊಯಿಲಿ ಆಡಳಿತದಲ್ಲಿ ಉಪಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು.

ಪ್ರದೇಶ ಕಾಂಗ್ರೆಸ್ ಅಧ್ಯಕ್ಷರಾಗಿ 1999ರಲ್ಲಿ ಪಕ್ಷವನ್ನು ಅಧಿಕಾರಕ್ಕೆ ತಂದು 2004ರವರೆಗೆ ಮುಖ್ಯಮಂತ್ರಿಯಾಗಿ ಕಾರ್ಯಭಾರ ನಡೆಸಿದರು.

ನಂತರ ಕೇಂದ್ರ ವಿದೇಶಾಂಗ ಸಚಿವರಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿ, 2008ರಲ್ಲಿ ರಾಜ್ಯಪಾಲ ಹುದ್ದೆ ತೊರೆದು ಮತ್ತೆ ರಾಜ್ಯ ರಾಜಕಾರಣಕ್ಕೆ ಹಿಂತಿರುಗಿದರು.

ಬದಲಾದ ರಾಜಕೀಯ ಸನ್ನಿವೇಶದಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ ಕೃಷ್ಣ ಅವರು, ಅಲ್ಪದಿನಗಳಲ್ಲೇ ಸಕ್ರಿಯ ರಾಜಕೀಯದಿಂದ ನಿವೃತ್ತಿ ಘೋಷಿಸಿ ವಿಶ್ರಾಂತ ಬದುಕು ನಡೆಸುತ್ತಿದ್ದರು.

# ಪಂಚಮಸಾಲಿ ಹೋರಾಟ ಹತ್ತಿಕ್ಕಲು ಹಿಟ್ಲರ್ ಮಾರ್ಗ: ಹೆಚ್ಡಿಕೆ

ಬೆಂಗಳೂರು, ಡಿ.10- ಪಂಚಮಸಾಲಿ ಬಂಧುಗಳ ಹೋರಾಟವನ್ನು ಹತ್ತಿಕ್ಕಲು ರಾಜ್ಯದ ಕಾಂಗ್ರೆಸ್ ಸರ್ಕಾರ ಆ ಹಿಟ್ಲರ್ ಮಾರ್ಗ ಆಯ್ಕೆ ಮಾಡಿಕೊಂಡಿರುವುದು ದುರದೃಷ್ಟಕರ. ಇದು ಶಿಲಾಯುಗ ಕಾಲದ ಮನಃಸ್ಥಿತಿಯ ಸರ್ಕಾರ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ.

ಸಂತರು, ಪಂಚಮಸಾಲಿ ಸಮುದಾಯದ ಜಗದ್ಗುರುಗಳಾದ ಶ್ರೀ ಬಸವ ಜಯ ಮೃತ್ಯುಂಜಯ ಮಹಾಸ್ವಾಮೀಜಿಯನ್ನು ಅತ್ಯಂತ ಹೇಯವಾಗಿ ನಡೆಸಿಕೊಂಡಿರುವುದು ನೋವುಂಟು ಮಾಡಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಹೇಳಿದ್ದಾರೆ.

ತಮ್ಮ ಬೇಡಿಕೆಗಳ ಬಗ್ಗೆ ಪೂಜ್ಯ ಸ್ವಾಮೀಜಿ ಅವರು, ಸಮುದಾಯದ ಪ್ರಮುಖರು ನಿರಂತರವಾಗಿ ಸರ್ಕಾರಕ್ಕೆ ಮನವಿ ಮಾಡುತ್ತಲೇ ಇದ್ದರು. ಆದರೂ ಸರ್ಕಾರ ಕಿವುಡಾಗಿತ್ತು, ನಿರ್ಲಕ್ಷ್ಯ ವಹಿಸಿತ್ತು. ಶಾಂತಿಯುತವಾಗಿ ಪ್ರತಿಭಟಿಸಲು ಬಂದ ಸ್ವಾಮೀಜಿಗಳು, ಸಮುದಾಯದ ನಾಯಕರು, ಜನತೆಯ ಮೇಲೆ ದಬ್ಬಾಳಿಕೆ ನಡೆಸಿ ಪೊಲೀಸ್ ವಶಕ್ಕೆ ತೆಗೆದುಕೊಂಡ ಕ್ರಮ ಖಂಡನೀಯ ಎಂದು ಹೇಳಿದ್ದಾರೆ.

# ಕೃಷ್ಣರಿಗೆ ಕೃಷ್ಣರೇ ಸಾಟಿ ! ಹೋಗಿ ಬನ್ನಿ ಸರ್



ಅದು ತೊಂಬತ್ತರ ದಶಕದ ಕೊನೆಯ ದಿನಗಳು. ರೈಲು ಉದ್ಯೋಗಿಯಾಗಿದ್ದ ನಾನಂದು ರಾತ್ರಿ ಪಾಳಿಯಲ್ಲಿ ಹರಿಹರ ನಿಲ್ದಾಣದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೆ.

ಮಧ್ಯರಾತ್ರಿ ಹನ್ನೆರಡರ ಸಮಯ. ಸ್ಟೇಷನ್ ಮುಂದೆ ಕಾರುಗಳು ಬಂದು ನಿಂತವು. ಆ ವೇಳೆಗಾಗಲೇ ನೆರೆದಿದ್ದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ತಮ್ಮ ನಾಯಕನಿಗೆ ಜೈಕಾರ ಹಾಕಲಾರಂಭಿಸಿದ್ದರೆ, ಮುಂದಿನ ವಾಹನದಿಂದ ಬಂದಿಳಿದಿದ್ದ ಪಕ್ಷದ ಯುವ ನಾಯಕರುಗಳು, ಮುಂಚೆಯೇ ವಿಚಾರ ತಿಳಿಸಿದ್ದರೂ ತಮ್ಮ ಪಕ್ಷದ ರಾಜ್ಯಾಧ್ಯಕ್ಷರಿಗೆ, ರೈಲು ಬರುವವರೆಗೂ ವಿಶ್ರಮಿಸಲು ಪ್ರಯಾಣಿಕರ ಕೊಠಡಿ ಸ್ವಚ್ಛಗೊಳಿಸದಿರುವುದಕ್ಕೆ ಸಿಡಿಮಿಡಿಗೊಳ್ಳುತ್ತಾ, ರೇಗುತ್ತಿದ್ದವರನ್ನು ಸಂಭಾಳಿಸಲು ನಾನು ಕರ್ತವ್ಯ ದೃಷ್ಟಿಯಿಂದ ಮುಂದಾದಾಗ ಕಂಡವರು ಅಂದು ಯುವ ಕಾಂಗ್ರೆಸ್ ಅಧ್ಯಕ್ಷರಾಗಿದ್ದ ಮಿತ್ರ ಹೆಚ್. ಆಂಜನೇಯ!

ಸದ್ಯದಲ್ಲೇ ಬರಲಿರುವ ರಾಜ್ಯದ ವಿಧಾನಸಭಾ ಚುನಾವಣೆಯಲ್ಲಿ, ಮತ್ತೆ ಪಕ್ಷವನ್ನು ಅಧಿಕಾರಕ್ಕೆ ತರುವ ಛಲದಿಂದ ಪಾಂಚಜನ್ಯ ಮೊಳಗಿಸಿ, ಚೈತ್ರಯಾತ್ರೆ ಕೈಗೊಂಡಿದ್ದ ಅಂದಿನ ಕೆ.ಪಿ.ಸಿ.ಸಿ. ಅಧ್ಯಕ್ಷರೂ ಆಗಿದ್ದ ಹಿರಿಯ ನಾಯಕ ಎಸ್.ಎಂ.ಕೃಷ್ಣ ಹರಪನಹಳ್ಳಿ ಕಾರ್ಯಕ್ರಮ ಮುಗಿಸಿ, ರಾತ್ರಿ ರಾಣಿ ಚೆನ್ನಮ್ಮ ಎಕ್ಸ್‌ಪ್ರೆಸ್ ನಲ್ಲಿ ಬೆಂಗಳೂರಿಗೆ ವಾಪಸ್ಸಾಗಲು ಹರಿಹರ ನಿಲ್ದಾಣಕ್ಕೆ ಬಂದಿದ್ದರು. ಮೊದಲೇ ತಿಳಿಸಿದ್ದರೂ ಸ್ವಚ್ಛತಾ ಕಾರ್ಯಕೈಗೊಳ್ಳದ ಬಗ್ಗೆ ಆಕ್ಷೇಪಿಸುತ್ತಿದ್ದ ಆಂಜನೇಯರಿಗೆ ಸಮಧಾನ ಹೇಳಿ, ತ್ವರಿತವಾಗಿ ಶುಚಿಗೊಳಿಸಲು ಸಿಬ್ಬಂದಿಗೆ ಸೂಚಿಸಿ, ಅಧ್ಯಕ್ಷರನ್ನು ಕರೆತರುವಂತೆ ವಿನಂತಿಸಿ ಪರಿಸ್ಥಿತಿಯನ್ನು ತಹಬಂದಿಗೆ ತಂದದ್ದಾಯಿತು.

ನೀಳಕಾಯ, ವಯಸ್ಸು ಅರವತ್ತು ದಾಟಿದ್ದರೂ ನಲ್ವತ್ತರ ಹರೆಯದವರ ಚುರುಕು ನಡಿಗೆ, ತೀಕ್ಷ್ಣ ಆದರೆ ಮಂದಸ್ಮಿತ... ಒಟ್ಟಿನಲ್ಲಿ ಕಂಡೊಡನೆ ಗೌರವ ಭಾವವುಕ್ಕಿಸುವ ಕೃಷ್ಣರು ಸರಸರನೆ ಕೊಠಡಿಯ ಒಳ ಕಾಲಿಟ್ಟರು. ಜೊತೆಗಿದ್ದ ಆಂಜನೇಯರು, ನನ್ನನ್ನು ಪರಿಚಯಿಸುತ್ತಾ , "ಇವರು ರೈಲು ಇಲಾಖೆಯಲ್ಲಿದ್ದಾರೆ. ಆದರೆ ಮೂಲತಃ ಪತ್ರಕರ್ತರು. ಒಳ್ಳೆಯ ಬರಹಗಾರರು. ಇವರನ್ನು ಪತ್ರಿಕೆಯಲ್ಲಿ ಉಳಿಸಿಕೊಳ್ಳಲಾಗಲಿಲ್ಲ, ಅದೊಂದು ವಿಪರ್ಯಾಸ" ಎಂದಿದ್ದನ್ನು ಆಲಿಸಿದ ಕೃಷ್ಣರು ಆಶ್ಚರ್ಯಚಕಿತರಾದರು. ಬೇರಾವುದೋ ಉದ್ಯೋಗದಿಂದ ಸರ್ಕಾರಿ ಕೆಲ್ಸ ಅಂತ ಬಂದೋರನ್ನು ಕಂಡಿದ್ದೇನೆ. ಆದರೆ, ಪತ್ರಿಕೆಯಿಂದ ಬಂದವರನ್ನು ನೋಡಿದ್ದು ಇದೇ ಮೊದಲು ಎಂದರಲ್ಲದೇ, ನಡೀರಿ.. ನಾನು ನಿಮ್ಮ ಜೊತೆಯೇ ಕೂರುತ್ತೇನೆ. ಪೇಪರ್‌ನೋರ ಜೊತೆ ಇದ್ದರೆ ಒಂದಷ್ಟು ವಿಚಾರ ತಿಳಿದಂತಾಗುತ್ತದೆ ಎಂದು ನನ್ನ ಕಛೇರಿಗೇ ಬಂದು, ಚಹಾ ಸ್ವೀಕರಿಸಿ, ಸೊಗಸಾಗಿದೆ ಎಂದು ಸೌಜನ್ಯ ಮೆರೆದರು.

ಅಂದು ರೈಲು ಒಂದು ತಾಸು ತಡವಾಗಿತ್ತು. ಕಿರಿದಾಗಿದ್ದ ಬುಕ್ಕಿಂಗ್ ಆಫೀಸಿನಲ್ಲಿ ಅಭಿಮಾನಿಗಳು ಕಿಕ್ಕಿರಿಯಲಾರಂಭಿಸಿದ್ದರು. ಸಹಜ ಮಾತುಕತೆ ಸಾಧ್ಯವಾಗಲಿಲ್ಲ. 'ಮಾಸ್ಟರೇ, ನಿಮಗೆ ತೊಂದರೆ ಎನಿಸದಿದ್ದರೆ, ಇಬ್ಬರೇ ಪ್ಲಾಟ್ ಫಾರಂ ನಲ್ಲಿ ಅಷ್ಟು ದೂರ ಹೋಗಿ ಬರಬಹುದಲ್ಲವೇ?' ಎಂದರು. ಅಂದು ರಾಜ್ಯಸಭಾ ಸದಸ್ಯರೂ ಆಗಿದ್ದ ಸಾಹೇಬರು. ನನ್ನ ಸಹಾಯಕನಿಗೆ ಟಿಕೆಟ್ ಕೊಡಲು ಹಚ್ಚಿ ಹೊರ ಹೊರಟಿದ್ದಾಯಿತು.

**ಬೇರಾವುದೋ ಉದ್ಯೋಗದಿಂದ ಸರ್ಕಾರಿ ಕೆಲ್ಸ ಅಂತ ಬಂದೋರನ್ನು ಕಂಡಿದ್ದೇನೆ. ಆದರೆ, ಪತ್ರಿಕೆಯಿಂದ ಬಂದವರನ್ನು ನೋಡಿದ್ದು ಇದೇ ಮೊದಲು ಎಂದರಲ್ಲದೇ, ನಡೀರಿ.. ನಾನು ನಿಮ್ಮ ಜೊತೆಯೇ ಕೂರುತ್ತೇನೆ. ಪೇಪರ್‌ನೋರ ಜೊತೆ ಇದ್ದರೆ ಒಂದಷ್ಟು ವಿಚಾರ ತಿಳಿದಂತಾಗುತ್ತದೆ ಎಂದು ನನ್ನ ಕಛೇರಿಗೇ ಬಂದು, ಚಹಾ ಸ್ವೀಕರಿಸಿ, ಸೊಗಸಾಗಿದೆ ಎಂದು ಸೌಜನ್ಯ ಮೆರೆದರು ಕೃಷ್ಣ....**

ಕೃಷ್ಣರೇನೋ 'ನಿಮ್ಮ ಬಳಿ ಸಾಕಷ್ಟು ವಿಚಾರ ತಿಳಿಯುವುದಿದೆ' ಎಂದು ಆರಂಭದಲ್ಲಿ ಹೇಳಿದ್ದರು. ಆದರೆ ಆ ಮುಕ್ಕಾಲು ಘಂಟೆಯಲ್ಲಿ ನಾನು ಮಾತನಾಡಿದ್ದು ತೀರಾ ಅಂದ್ರೆ ತೀರಾ ಕ್ವಚಿತ್. ದಶಕಗಳ ಹಿಂದೆ 1975 ರ ಸುಮಾರಿನಲ್ಲಿ ರಾಜ್ಯದ ಕೈಗಾರಿಕಾ ಸಚಿವರಾಗಿದ್ದ ಕೃಷ್ಣರ ಜೊತೆ ಏಕೈಕ ಪತ್ರಕರ್ತನಾಗಿ ಚಿತ್ರದುರ್ಗ ಜಿಲ್ಲಾ ಪ್ರವಾಸ ಕೈಗೊಂಡದ್ದು, ಚಿತ್ರದುರ್ಗ ಪ್ರವಾಸೀ ಮಂದಿರದಲ್ಲಿ ಊಟ ಮಾಡಿದ್ದನ್ನು ನೆನಪಿಸಿದ್ದಷ್ಟೆ. ಉಳಿದಂತೆ ನಾನು ಆಲಿಸಿದ್ದು ಮಾತ್ರ. ನನಗಿಂತಾ ಎರಡೂವರೆ ದಶಕಕ್ಕೂ ಹೆಚ್ಚಿನ ವಯೋಮಾನದ, ದೇಶ - ವಿದೇಶಗಳಲ್ಲಿ ಅಭ್ಯಸಿಸಿ, ರಾಜ್ಯ - ಕೇಂದ್ರದಲ್ಲಿ ವಿವಿಧ ಜವಾಬ್ದಾರಿ ನಿರ್ವಹಿಸಿ, ರಾಜ್ಯದ ರಾಜಕಾರಣಿಗಳಲ್ಲಿ highly talented ಎನಿಸಿದ್ದ ಕೃಷ್ಣರು. ಹಿಂದಿನ ಮೂರೂವರೆ ದಶಕಗಳ ರಾಜಕೀಯ ಚಿತ್ರಣ ಹಾಗೂ ಮುಂದಿನ ದಿನಗಳ ನಾಡು ಮುನ್ನಡೆಯಬೇಕಾದ - ಮುನ್ನಡೆಸಬೇಕಾದ ಮಾರ್ಗೋಪಾಯಗಳನ್ನು ವಿವರಿಸಿದ್ದನ್ನು ಕೇಳಿ, ಸಾರ್ಥಕ್ಯ ಭಾವ ಅನುಭವಿಸಿದ್ದು ನಾನು !!

ರೈಲು ಬಂತು. ಹೊರಡುವ ಮುನ್ನ, ಬೆಂಗಳೂರಿಗೆ ಬಂದು ಭೇಟಿ ಮಾಡಲು ಆಹ್ವಾನವಿತ್ತ ಕೃಷ್ಣರು 'ಒಂದು ತಾಸು ಕಳೆದದ್ದೇ ಗೊತ್ತಾಗಲಿಲ್ಲ, ಬರೆಯುತ್ತಿರಿ, ಬಿಡಬೇಡಿ' ಎಂದು ಸೂಚಿಸುವುದನ್ನು ಮರೆಯಲಿಲ್ಲ.

ಕೃಷ್ಣರಿಗೆ ಕೃಷ್ಣರೇ ಸಾಟಿ ! ಹೋಗಿ ಬನ್ನಿ ಸರ್, ಅಂತಿಮ ನಮಸ್ಕಾರ.

**- ಹಳೇಬೀಡು ರಾಮಪ್ರಸಾದ್**, ದಾವಣಗೆರೆ.

# ಸಂಘರ್ಷಕ್ಕೆ ತಿರುಗಿದ ಪಂಚಮಸಾಲಿ ಹೋರಾಟ



## ಹೋರಾಟ ಹತ್ತಿಕ್ಕಲು ಕಿಡಿಗೇಡಿಗಳ ಯತ್ನ: ಯತ್ನಾಳ್

**ಹೋರಾಟ ಹತ್ತಿಕ್ಕಲು ಕಾಂಗ್ರೆಸ್ ಸರ್ಕಾರದಲ್ಲಿರುವ ನಮ್ಮದೇ ಸಮಾಜದ ಕೆಲ ಕಿಡಿಗೇಡಿಗಳು ಮಾಡಿದ ಕೆಲಸವಿದು. ಮುಂದಿನ ಹೋರಾಟದ ಬಗ್ಗೆ ಸ್ವಾಮೀಜಿ ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧ ಎಂದು ಯತ್ನಾಳ್ ಹೇಳಿದ್ದಾರೆ. ಸ್ವಾಮೀಜಿ ಮತ್ತು ಸಾಮಾನ್ಯ ಜನರ ಮೇಲೂ ಲಾಠಿ ಬೀಸಿದ್ದಾರೆ. ಆ ಮೂಲಕ ಜನರ ಶಾಪಕ್ಕೆ ಈ ಸರ್ಕಾರ ಗುರಿಯಾಗಿದೆ. ಇನ್ಮುಂದೆ ರಾಜ್ಯಾದ್ಯಂತ ಹೋರಾಟ ತೀವ್ರ ಸ್ವರೂಪ ಪಡೆದುಕೊಳ್ಳಲಿದೆ ಎಂದು ವಿಧಾನಸಭೆ ಉಪ ನಾಯಕ ಅರವಿಂದ ಪಾಟೀಲ ಆಕ್ರೋಶ ಹೊರಹಾಕಿದರು.**

**(1ನೇ ಪುಟದಿಂದ)** ಪೊಲೀಸರು ಮೂರು ಬಾರಿ ಲಾಠಿ ಬೀಸಿದರು. ಕೆಲವರಿಗೆ ತಲೆ ಒಡೆದು ರಕ್ತ ಸೋರಿತು. ಮತ್ತೆ ಕೆಲವರ ಮೈ-ಕಾಲುಗಳಿಗೆ ಗಾಯಗಳಾದವು. ಆದರೂ ಜನ ಹೆದ್ದಾರಿಯಲ್ಲಿ ಓಡಾಡಿದರು. ಪೊಲೀಸರು ಮತ್ತು ಹೋರಾಟಗಾರರ ನಡುವಿನ ಸಂಘರ್ಷ ನಿರಂತರವಾಗಿ ಮುಂದುವರೆಯಿತು.

ಹೆದ್ದಾರಿಯಲ್ಲಿ ಅಪಾರ ಸಂಖ್ಯೆಯಲ್ಲಿ ಸೇರಿದ್ದ ಪೊಲೀಸರು ಬ್ಯಾರಿಕೇಡ್ ಅಡ್ಡ ಇಟ್ಟು, ವಾಹನಗಳನ್ನು ನಿಲ್ಲಿಸಿ ಜನರನ್ನು ತಡೆದರು. ಹೆದ್ದಾರಿ ತುಂಬಾ ಜನ ಹರಿದಾಡಿದರು. ನಾಲ್ಕು ಕಡೆ ವಾಹನಗಳ ಸಂಚಾರ ಸಂಪೂರ್ಣ ಬಂದ್ ಮಾಡಿದ್ದರು. ಇದರ ನಡುವೆ ಸ್ವಾಮೀಜಿ ಅವರನ್ನು ಭೇಟಿ ಮಾಡಲು ಹೋದ ಹಿರಿಯ ಅಧಿಕಾರಿಗಳು, ಕೆಲವೇ ಜನರೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿ ಆಗುವಂತೆ ಮನವಿ ಮಾಡಿಕೊಂಡರು. ಇದಕ್ಕೆ ಒಪ್ಪದ ಸ್ವಾಮೀಜಿ ನಾವು ಶಾಂತಿಯುತವಾಗಿ ಸುವರ್ಣಸೌಧದ ಮುಂದೆ ಉಪವಾಸ ಸತ್ಯಾಗ್ರಹ ಮಾಡುತ್ತೇವೆ ಎಂದು ತಿಳಿಸಿದರು.

ಇದಕ್ಕೂ ಮೊದಲು ಸಚಿವರಾದ ಎಚ್.ಸಿ.ಮಹಾದೇವಪ್ಪ, ವೆಂಕಟೇಶ, ಲಕ್ಷ್ಮಿ ಹೆಬ್ಬಾಳ್ಕರ್, ಡಿ.ಸುಧಾಕರ್ ಅವರು ಪ್ರತಿಭಟನಾ ವೇದಿಕೆಗೆ ಬಂದು ಮುಖ್ಯಮಂತ್ರಿಗಳ ಪರವಾಗಿ ಮನವಿ ಮಾಡಿದರು. ಹೋರಾಟದ ಉದ್ದೇಶವನ್ನು ಸಿಎಂ ಗಮನಕ್ಕೆ ತರುತ್ತೇವೆ. ಯಾರೂ ಕಾನೂನು ಕೈಗೆತ್ತಿಕೊಳ್ಳಬಾರದು ಎಂದು ತಿಳಿಸಿದರು. ಆಗ ಜನಸ್ತೋಮದಿಂದ ಭಾರೀ ಪ್ರಮಾಣದ ಕೂಗಾಟ, ಚೀರಾಟ, ಶಿಳ್ಳೆ-ಕೇಕೆಗಳು ಆರಂಭವಾದವು.

ಮುಖ್ಯಮಂತ್ರಿ ಸ್ಥಳಕ್ಕೆ ಬರಬೇಕು. ಇಲ್ಲವೇ ನಾವೇ ಸೌಧಕ್ಕೆ ಹೋಗುತ್ತೇವೆ ಎಂದು ಘೋಷಣೆ ಮೊಳಗಿಸಿದರು. ಆಗ ಸೌಧಕ್ಕೆ ಹೋಗೋಣ ನಡೆಯಿರಿ ಎಂದು ಸ್ವಾಮೀಜಿ ಹೇಳುತ್ತಿದ್ದಂತೆ ಅಪಾರ ಸಂಖ್ಯೆಯಲ್ಲಿ ಸೇರಿದ್ದ ಜನ ನಾ ಮುಂದು, ತಾ ಮುಂದು ಎಂದು ಮುನ್ನುಗ್ಗಿದರು. ದಾರಿ, ಹೊಲ, ಸಿಕ್ಕ ಸಿಕ್ಕ ಜಾಗದಲ್ಲಿ ರಾಷ್ಟ್ರೀಯ ಹೆದ್ದಾರಿ ತಲುಪಿದರು.

# ಸಂಕಷ್ಟಗಳಲ್ಲೂ ರಾಜ್ಯದ ಕೀರ್ತಿ ಹೆಚ್ಚಿಸಿದ್ದ ಎಸ್.ಎಂ. ಕೃಷ್ಣ

ಬೆಂಗಳೂರು, ಡಿ. 10- ಸಾಲು ಸಾಲು ಸಂಕಷ್ಟಗಳ ನಡುವೆಯೂ ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿ ನಾಲ್ಕೂವರೆ ವರ್ಷ ಅಧಿಕಾರದ ವೇಳೆ ವಿಶ್ವ ಭೂಪಟದಲ್ಲಿ ಕರ್ನಾಟಕ ರಾರಾಜಿಸುವಂತೆ ಮಾಡಿದ ಕೀರ್ತಿ ಇವರಿಗೆ ಸಲ್ಲುತ್ತದೆ.

ಮುಖ್ಯಮಂತ್ರಿಯಾಗಿ ರಾಜ್ಯವನ್ನು ಅದರಲ್ಲೂ ಬೆಂಗಳೂರನ್ನು ಐಟಿ-ಬಿಟಿ ಕ್ಷೇತ್ರದಲ್ಲಿ ವಿಶ್ವದ ಸಿಲಿಕಾನ್ ಸಿಟಿಯಾಗಿ ಮೇರು ಮಟ್ಟಕ್ಕೆ ಕೊಂಡೊಯ್ಯುವಲ್ಲಿ ಕಾರಣೀಭೂತರಾಗಿದ್ದಲ್ಲದೆ, ರಾಜಧಾನಿಯನ್ನು ಸಿಂಗಪೂರ್ ಮಾದರಿ ನಗರವನ್ನಾಗಿಸುವ ಕಾರ್ಯಕ್ಕೆ ಮುಂದಾಗಿದ್ದರು.

ಇವರ ಆಡಳಿತಾವಧಿಯಲ್ಲೇ ಬೆಂಗಳೂರು-ಮೈಸೂರು ರಾಜ್ಯ ಹೆದ್ದಾರಿ ರಾಷ್ಟ್ರೀಯ ಹೆದ್ದಾರಿಯಾಗಿ ನಾಲ್ಕು ಪಥಗಳ ಮಾರ್ಗವಾಗಿ ಮಾರ್ಪಟ್ಟಿತು.

ಬೆಂಗಳೂರಿನಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ, ಮೆಟ್ರೊ ಯೋಜನೆ, ನಗರ ಮತ್ತು ಪಟ್ಟಣ ಪ್ರದೇಶಗಳಿಗೆ ಮೂಲ ಸೌಕರ್ಯ ಕಲ್ಪಿಸುವುದೂ ಸೇರಿದಂತೆ ಅನೇಕ ಜನಪರ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸಿದರು.

ಸತತ ಬರಗಾಲದ ನಡುವೆಯೂ ರಾಜ್ಯದ ಬೊಕ್ಕಸ ಬರಿದಾಗದಂತೆ ನೋಡಿಕೊಂಡಿದ್ದಲ್ಲದೆ, ರೈತರಿಗಾಗಿ ಯಶಸ್ವಿನಿ ವಿಮಾ ಯೋಜನೆ, ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆ ಆರಂಭಿಸಿದ ಹೆಗ್ಗಳಿಕೆ ಇವರದ್ದಾಗಿದೆ.

ಸ್ತ್ರೀಶಕ್ತಿ ಸ್ವ ಸಹಾಯ ಗುಂಪುಗಳನ್ನು ಅಸ್ತಿತ್ವಕ್ಕೆ ತಂದಿಲ್ಲದೆ, ಗ್ರಾಮೀಣ ಭಾಗದಲ್ಲಿ ವಸತಿಗಳ ನಿರ್ಮಾಣಕ್ಕೆ ಒತ್ತು ನೀಡಿದರು.



ಆಡಳಿತವನ್ನು ಮದ್ಯದ ದೊರೆಗಳಿಂದ ಮುಕ್ತಗೊಳಿಸಲು ಪಾನೀಯ ನಿಗಮ ಸ್ಥಾಪಿಸಿ, ಸೆಕೆಂಡ್ಸ್ ಹಾವಳಿ ತಡೆಗಟ್ಟಿ ಪಾನಪ್ರಿಯರಿಗೆ ಕಡಿಮೆ ದರದಲ್ಲಿ ಮದ್ಯ ದೊರೆಯುವಂತೆ ಮಾಡುವ ಮೂಲಕ ರಾಜ್ಯದ ಬೊಕ್ಕಸಕ್ಕೂ ಹಣ ಹರಿದುಬರುವಂತೆ ಮಾಡಿದರು.

ಒಂದೇ ಸೂರಿನಡಿ ಸರ್ಕಾರಿ ಸೇವೆ ದೊರೆಯಬೇಕೆಂದು ವಿಧಾನಸೌಧದ ಪಕ್ಕದಲ್ಲೇ ವಿಕಾಸಸೌಧ, ಅದರ ಸನಿಹದಲ್ಲೇ ಉದ್ಯೋಗಸೌಧ ನಿರ್ಮಿಸಿದರು.

ರೈತರ ಜಮೀನಿಗಾಗಿ ಭೂಮಿ ಆಪ್ ತಂದಿಲ್ಲದೆ, ಬಿಡಿಎ ಮೂಲಕ ಹೊಸ ಬಡಾವಣೆಗಳನ್ನು ನಿರ್ಮಿಸಿ ಲಕ್ಷಾಂತರ ನಿವೇಶನಗಳನ್ನು ಹಂಚಿಕೆ ಮಾಡಿದರು.

ಇವರ ಆಡಳಿತಾವಧಿಯಲ್ಲಿ ಮಳೆ ಇಲ್ಲದೆ ರೈತರು ಕಂಗಾಲಾದ ಸನ್ನಿವೇಶದಲ್ಲಿ ಕಾವೇರಿ ಜಲವಿವಾದ ಉಲ್ಬಣಗೊಂಡಿತ್ತು.

ತಮಿಳುನಾಡಿಗೆ ಕಾವೇರಿ ನದಿ ನೀರು ಹರಿಸುವಂತೆ ಸುಪ್ರೀಂಕೋರ್ಟ್ ಆದೇಶ ನೀಡುವುದಕ್ಕೂ ಮುನ್ನ ಇವರು ಬೆಂಗಳೂರಿನಿಂದ ಮಂಡ್ಯದವರೆಗೆ ಪಾದಯಾತ್ರೆ ನಡೆಸಿದರು.

ಕೆ.ಎಚ್.ರಂಗನಾಥ್, ಎಚ್.ಸಿ.ಶ್ರೀಕಂಠಯ್ಯ, ಎಂ.ವೈ.ಘೋರ್ಪಡೆ, ಮಲ್ಲಿಕಾರ್ಜುನ ಖರ್ಗೆ, ಧರ್ಮಸಿಂಗ್, ಡಿ.ಬಿ.ಚಂದ್ರೇಗೌಡ ಸೇರಿದಂತೆ ಘಟಾನುಘಟಿಗಳು ಕೃಷ್ಣ ಮಂತ್ರಿಮಂಡಲದಲ್ಲಿ ಇದ್ದರು.

ಆದಾಗ್ಯೂ ಇವರ ಆಡಳಿತಾವಧಿಯಲ್ಲಿ ಕಾವೇರಿ ಜಲ ವಿವಾದ, ಜಿಲ್ಲಾ, ತಾಲ್ಲೂಕು ಪಂಚಾಯತ್ ಚುನಾವಣೆ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಗ್ರಾಮೀಣ ಕೃಪಾಂಕ ಸೇರಿದಂತೆ ಹಲವು ವಿಷಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಯಿತು.

ಇದರ ನಡುವೆ ಕಾಡುಗಳ್ಳ ವೀರಪ್ಪನ್‌ನಿಂದ ಕನ್ನಡದ ವರನಟ ಡಾ.ರಾಜ್‌ಕುಮಾರ್ ಅಪಹರಣ ಕೃಷ್ಣ ಸರ್ಕಾರವನ್ನು ಸಂಕಷ್ಟಕ್ಕೆ ಸಿಲುಕಿಸಿತು.

ಅಂದು ತಮಿಳುನಾಡು ಸರ್ಕಾರ ಮತ್ತು ಅಲ್ಲಿನ ಸಿನೆಮಾ ದಿಗ್ಗಜರು ಹಾಗೂ ಪತ್ರಕರ್ತರನ್ನು ಬಳಸಿಕೊಂಡು ಬಹಳ ಚಾಕಚಕ್ಯತೆಯಿಂದ ವೀರಪ್ಪನ್ ಬಂಧನದಿಂದ ರಾಜ್‌ಕುಮಾರ್ ಅವರನ್ನು ಬಿಡಿಸಿಕೊಂಡು ಬರುವಲ್ಲಿ ಕೃಷ್ಣ ಯಶಸ್ವಿಯಾದರು.

ವೀರಪ್ಪನ್ ಇವರ ಆಡಳಿತದಲ್ಲಿ ಒಂದಲ್ಲಾ ಒಂದು ಸಮಸ್ಯೆ ಒಡ್ಡುತ್ತಲೇ ಇದ್ದ, ಮಾಜಿ ಸಚಿವ ನಾಗಪ್ಪ ಹತ್ಯೆಯೂ ಅದೇ ಸಮಯದಲ್ಲಿ ನಡೆಯಿತು.

# ಇಸ್ರೋದಿಂದ 'ವೆಲ್ ಡೆಕ್' ಚೇತರಿಕೆ ಪ್ರಯೋಗ ಯಶಸ್ವಿ



ನವದೆಹಲಿ, ಡಿ.10- ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ISRO) ಮತ್ತು ಭಾರತೀಯ ನೌಕಾಪಡೆಯು ವಿಶಾಖಪಟ್ಟಣಂ ಕರಾವಳಿಯಲ್ಲಿ ಗಗನಯಾನ ಮಿಷನ್‌ಗಾಗಿ 'ವೆಲ್ ಡೆಕ್' ಚೇತರಿಕೆ ಪ್ರಯೋಗಗಳನ್ನು ಯಶಸ್ವಿಯಾಗಿ ನಡೆಸಿತು.

ಈ ನಿರ್ಣಾಯಕ ಪರೀಕ್ಷೆಯು ಕ್ರೂ ಮಾಡ್ಯೂಲ್‌ನ ಚೇತರಿಕೆಯನ್ನು ಅನುಕರಿಸುವುದನ್ನು ಒಳಗೊಂಡಿತ್ತು, ಇದನ್ನು ಗಗನಯಾತ್ರಿಗಳನ್ನು ಅವರ ಕಾರ್ಯಾಚರಣೆಯ ನಂತರ ಭೂಮಿಗೆ ಮರಳಿ ತರಲು ಬಳಸಲಾಗುತ್ತದೆ.

ಈಸ್ಟರ್ನ್ ನೇವಲ್ ಕಮಾಂಡ್ ಉತ್ತಮ ಡೆಕ್ ಹಡಗಿನಲ್ಲಿ ಪ್ರಯೋಗಗಳು ನಡೆದವು, ಇದು ಅದರ ಡೆಕ್ ಅನ್ನು ನೀರಿನಿಂದ ತುಂಬಿಸಲು ವಿನ್ಯಾಸಗೊಳಿಸಲಾಗಿದೆ, ಇದು ದೋಣಿಗಳು ಮತ್ತು ಬಾಹ್ಯಾಕಾಶ ನೌಕೆಗಳನ್ನು ಸುರಕ್ಷಿತವಾಗಿ ಹಿಂಪಡೆಯಲು ಅನುವು ಮಾಡಿಕೊಡುತ್ತದೆ.

ಗಗನಯಾನ ಕಾರ್ಯಾಚರಣೆಯ ಸಮಯದಲ್ಲಿ ಕ್ರೂ ಮಾಡ್ಯೂಲ್ ಸಮುದ್ರದಲ್ಲಿ ಇಳಿದ ನಂತರ, ಸಿಬ್ಬಂದಿಯನ್ನ ತ್ವರಿತವಾಗಿ ಮತ್ತು ಆರಾಮವಾಗಿ ಚೇತರಿಸಿಕೊಳ್ಳುವುದು ಅತ್ಯಗತ್ಯ. ವೆಲ್ ಡೆಕ್ ವಿಧಾನವು ಮಾಡ್ಯೂಲನ್ನು ಹಡಗಿಗೆ ಎಳೆಯಲು ಅನುವು ಮಾಡಿಕೊಡುತ್ತದೆ, ಅಲ್ಲಿ ಗಗನಯಾತ್ರಿಗಳು ಸುರಕ್ಷಿತವಾಗಿ ನಿರ್ಗಮಿಸಬಹುದು.

ಕ್ರೂ ಮಾಡ್ಯೂಲ್‌ನ ದ್ರವ್ಯರಾಶಿ ಮತ್ತು ಆಕಾರವನ್ನ ಅನುಕರಿಸುವ ಅಣಕು-ಅಪ್ ಬಳಸಿ, ಇಸ್ರೋ ಮತ್ತು ಭಾರತೀಯ ನೌಕಾಪಡೆಯ ಸಿಬ್ಬಂದಿ ಪ್ರಯೋಗದ ಸಮಯದಲ್ಲಿ ಸರಣಿ ಕಾರ್ಯಾಚರಣೆಗಳನ್ನು ನಡೆಸಿದರು.

ಇವುಗಳಲ್ಲಿ ರಿಕವರಿ ಬೋಯ್ ಜೋಡಿಸುವುದು, ಮಾಡ್ಯೂಲ್ ಎಳೆಯುವುದು, ಅದನ್ನು ಬಾವಿಯ ಡೆಕ್‌ಗೆ ಕುಶಲತೆಯಿಂದ ನಿರ್ವಹಿಸುವುದು, ಅದನ್ನು ಫಿಕ್ಚರ್ ಮೇಲೆ ಇರಿಸುವುದು ಮತ್ತು ಡೆಕ್‌ನಿಂದ ನೀರನ್ನು ಹೊರಹಾಕುವುದು ಸೇರಿವೆ.

## ಅಡಿಕೆ ಆಮದಿಗೆ ಕಡಿವಾಣ ಹಾಕಿ : ಉಪ ಉತ್ಪನ್ನಗಳ ಉತ್ತೇಜನಕ್ಕೆ ಆಗ್ರಹ

ದಾವಣಗೆರೆ, ಡಿ. 10 - ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯ ಸೇರಿದಂತೆ ವಿವಿಧ ರಾಜ್ಯಗಳ ಅಡಿಕೆ ಬೆಳೆಗಾರರ ಹಿತವನ್ನು ದೃಷ್ಟಿಯಲ್ಲಿಟ್ಟುಕೊಂಡು ಅಡಿಕೆ ಆಮದನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂದು ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಆಗ್ರಹಿಸಿದ್ದಾರೆ.

ಈ ಬಗ್ಗೆ ಲೋಕಸಭೆಯಲ್ಲಿಂದು ಪ್ರಶ್ನೋತ್ತರ ವೇಳೆ ಚುಕ್ಕೆ ಇಲ್ಲದ ಪ್ರಶ್ನೆ ಕೇಳಿದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಅಡಿಕೆ ಆಮದಿನಿಂದ ದೇಶದ ಅಡಿಕೆ ಬೆಳೆಗಾರರಿಗೆ ಸರಿಯಾದ ಬೆಲೆ ಸಿಗದೇ ತೊಂದರೆ ಆಗುತ್ತಿದೆ ಎಂದು ಸದನದ ಗಮನಕ್ಕೆ ತಂದರು. ಅಡಿಕೆ ಆಮದು ನಿಷೇಧದ ಜೊತೆಗೆ ಅಡಿಕೆಯಿಂದ ಮಾಡುವ ಉಪ ಉತ್ಪನ್ನಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕೆಂದು ಆಗ್ರಹಿಸಿದ ಅವರು ಅಡಿಕೆ ಬೆಳೆಗಾರರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರ ಸೂಕ್ತ ತೀರ್ಮಾನ ತೆಗೆದುಕೊಳ್ಳಬೇಕೆಂದು ಕೇಂದ್ರ ಕೃಷಿ ಮತ್ತು ತೋಟಗಾರಿಕೆ ಸಚಿವರಿಗೆ ಮನವಿ ಮಾಡಿದರು.

**ಖೇಲೋ ಇಂಡಿಯಾ ಕ್ರೀಡಾಂಗಣಕ್ಕೆ ಒತ್ತಾಯ :** ಅದೇ ರೀತಿ ಕೇಂದ್ರ ಕ್ರೀಡಾ ಸಚಿವರಿಗೆ ಖೇಲೋ ಇಂಡಿಯಾ ಯೋಜನೆಯಡಿ ದಾವಣಗೆರೆಯಲ್ಲಿ ಕ್ರೀಡಾಂಗಣ ಅನುಷ್ಠಾನ ಮತ್ತು ಅಭಿವೃದ್ಧಿಯ ಬಗ್ಗೆ ಗಮನ ಸೆಳೆದರು.

# ಸಂಯಮದ ಗೆರೆ ದಾಟದ ಎಸ್.ಎಂ. ಕೃಷ್ಣ

## 'ಮರೆಯಲಾಗದ ಘಟನೆ' ನೆನಪಿಸಿಕೊಂಡ ತರಳಬಾಳು ಜಗದ್ಗುರುಗಳು

ದಾವಣಗೆರೆ, ಡಿ. 10- ಕರ್ನಾಟಕದ ಹಿರಿಯ ರಾಜಕಾರಣಿ, ಮಾಜಿ ಮುಖ್ಯಮಂತ್ರಿ, ಮಾಜಿ ವಿದೇಶಾಂಗ ಸಚಿವ ಎಸ್.ಎಂ.ಕೃಷ್ಣ ನಿಧನವಾಗಿರುವುದು ನಾಡಿನ ಹಿರಿಯ ರಾಜಕೀಯ ಮುತ್ಸದ್ದಿಗಳ ಪರಂಪರೆಯ ದೊಡ್ಡ ಕೊಂಡಿಯೊಂದು ಕಳಚಿದಂತಾಗಿದೆ ಎಂದು ಶ್ರೀ ತರಳಬಾಳು ಜಗದ್ಗುರು ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಕೃಷ್ಣ ಅವರು ಎಂದೂ ಸಂಯಮದ ಗೆರೆ ದಾಟಿದವರಲ್ಲ, ಅವರು ಮುಖ್ಯಮಂತ್ರಿ ಆಗಿದ್ದಾಗ ರಾಜ್ಯದಲ್ಲಿ ತಲೆದೋರಿದ ಕಾವೇರಿ ಚಳುವಳಿ, ಡಾ. ರಾಜ್ ಕುಮಾರ್ ಅಪಹರಣ, ಬರಗಾಲದ ಬಿಸಿ ಇಂತಹ ಕಠಿಣ ಸಂದರ್ಭ ದಲ್ಲಿಯೂ ವಿರೋಧ ಪಕ್ಷದ ಬೋರ್ಗರೆಯುವ ಟೀಕೆ - ಟಿಪ್ಪಣಿಗಳನ್ನು ಸಮ ಚಿತ್ತದಿಂದ ಎದುರಿಸಿ ಸಮಸ್ಯೆಗಳನ್ನು ಪರಿಹರಿಸಿದವರು, ಅವರ ಪ್ರತಿ ಮಾತಿನ ಹಿಂದೆ ಅಧ್ಯಯನ ಶೀಲತೆ ವ್ಯಕ್ತವಾಗುತ್ತಿತ್ತು. ಮುಖ್ಯಮಂತ್ರಿ, ವಿದೇಶಾಂಗ ಸಚಿವ, ರಾಜ್ಯಪಾಲರಂತ ಹುದ್ದೆಗಳಲ್ಲಿ ಕಳಂಕ ರಹಿತವಾಗಿ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿದವರು ಎಂದು ಶ್ರೀಗಳು ಬಣ್ಣಿಸಿದ್ದಾರೆ.

ಇಂದಿನ ತಲೆಮಾರಿನ ರಾಜಕೀಯ ಧುರೀಣರಿಗೆ ಅವರ ರಾಜಕೀಯ ಜೀವನ ತೆರೆದಿಟ್ಟ ಪುಸ್ತಕವಿದ್ದಂತೆ. ಬೆಂಗಳೂರಿನ ಅಭಿವೃದ್ಧಿಯಲ್ಲಿ ಮಹತ್ತರ ಕೊಡುಗೆ ನೀಡಿದ್ದ ಎಸ್.ಎಂ.ಕೃಷ್ಣ ಅವರಿಂದಲೇ ಬೆಂಗಳೂರಿಗೆ ವಿಶ್ವಮಟ್ಟದಲ್ಲಿ ಸಿಲಿಕಾನ್ ಸಿಟಿ, ಐಟಿ- ಬಿಟಿ ಸಿಟಿ ಎಂಬ ಹೆಸರು ಬಂದಿತ್ತು ಎಂದು ತಿಳಿಸಿದ್ದಾರೆ.

ಸಿರಿಗೆರೆಯ ತರಳಬಾಳು ಮಠದೊಂದಿಗೆ ದೀರ್ಘಕಾಲದಿಂದಲೂ ಅತ್ಯಂತ ಭಕ್ತಿ ಗೌರವ ಹೊಂದಿದ್ದ ಕೃಷ್ಣ ಅವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ನಿರಂತರವಾಗಿ ಮಾರ್ಗದರ್ಶನ ಪಡೆಯುತ್ತಿದ್ದರು. ಮಠದ ವಾರ್ಷಿಕ ಕಾರ್ಯಕ್ರಮವಾದ ತರಳಬಾಳು ಹುಣ್ಣಿಮೆ ಮಹೋತ್ಸವಗಳಲ್ಲಿ ಪಾಲ್ಗೊಂಡಿದ್ದರು ಎಂದು ಹೇಳಿದ್ದಾರೆ.



ಅರಸೀಕೆರೆಯಲ್ಲಿ ತರಳಬಾಳು ಹುಣ್ಣಿಮೆ ಮಹೋತ್ಸವ ನಿಗದಿಯಾದಾಗ, ಗುಜರಾತ್ ನಲ್ಲಿ ಭೂಕಂಪದಿಂದ ಅನಾಹುತ ಸಂಭವಿಸಿತ್ತು. ಪರಂಪರೆಯಂತೆ 9 ದಿನಗಳು ನಡೆಯಬೇಕಿದ್ದ ಅರಸೀಕೆರೆ ಹುಣ್ಣಿಮೆಯನ್ನು ಗುಜರಾತ್ ನಲ್ಲಿ ಭೂಕಂಪದ ನೋವಿಗೆ ಮಿಡಿಯುವ ಕಾರ್ಯಕ್ರಮವನ್ನಾಗಿ ರೂಪಿಸಿ ಮಹೋತ್ಸವದ ಕೊನೆಯ ದಿನ ಪಲ್ಲಕ್ಕಿ ಉತ್ಸವವನ್ನು ರದ್ದುಗೊಳಿಸಿ, ನಾವು ಉತ್ಸವದ ಬದಲಾಗಿ ಅರಸೀಕೆರೆಯ ಬೀದಿಗಳಲ್ಲಿ ಸಂಚರಿಸಿ ಹಣ ಸಂಗ್ರಹಿಸಿ ಸಂತ್ರಸ್ತರಿಗೆ ಕಳುಹಿಸಿದಾಗ ಅವರೂ ಸಹ ಅಂದಿನ ದಿನದ ರಾತ್ರಿ ಕಾರ್ಯಕ್ರಮದಲ್ಲಿ ಅವರು ತಮ್ಮ ಧರ್ಮ ಪತ್ನಿ ಪ್ರೇಮಾರವರೊಂದಿಗೆ ಭಾಗವಹಿಸಿ ಮಠದ ಸಾಮಾಜಿಕ ಕಳಕಳಿಯನ್ನು ಪ್ರತ್ಯಕ್ಷವಾಗಿ ಕಂಡಂತಾಯಿತು ಎಂದು ಅತೀವ ಮೆಚ್ಚುಗೆ ವ್ಯಕ್ತಪಡಿಸಿದ್ದರು. ತರಳಬಾಳು ಹುಣ್ಣಿಮೆ ಮಹೋತ್ಸವದಲ್ಲಿ ನಮ್ಮ ಸಂಕಲ್ಪದಂತೆ ಹೊನವಳ್ಳಿ ಏತ ನೀರಾವರಿ ಯೋಜನೆ ಅನುಷ್ಠಾನಗೊಳ್ಳಲು ನೆರವಾಗಿದ್ದರು ಎಂದು ನೆನಪು ಮಾಡಿಕೊಂಡಿದ್ದಾರೆ.

ಒಮ್ಮೆ ಕೃಷ್ಣ ಅವರು ಯಾತ್ರೆಯ ಸಂದರ್ಭದಲ್ಲಿ ಮಠಕ್ಕೆ ಆಶೀರ್ವಾದಕ್ಕೆ ಆಗಮಿಸುವುದಾಗಿ ಬಯಕೆ ವ್ಯಕ್ತಪಡಿಸಿದಾಗ ಅದೇ ಸಮಯದಲ್ಲಿ ಪೂರ್ವ ನಿಗದಿಯಂತೆ ನಾವು ವಿದೇಶದಲ್ಲಿರುವುದಾಗಿ ತಿಳಿಸಿದರೂ ಸಹ ಸಾವಿರಾರು ಸಂಖ್ಯೆಯಲ್ಲಿ ಜನರೊಂದಿಗೆ ಆಗಮಿಸಿ ನಮ್ಮ ಅನುಪಸ್ಥಿತಿಯಲ್ಲಿ ಲಿಂಗೈಕ್ಯ ಗುರುವರ್ಯರ ಗದ್ದುಗೆಗೆ ಆಗಮಿಸಿ ಭಕ್ತಿ ಗೌರವ ಸಮರ್ಪಿಸಿದ್ದು ಅವರು ಮಠದ ಮೇಲೆ ಇಟ್ಟಿದ್ದ ಪೂಜ್ಯ ಭಾವನೆಯನ್ನು ಅನಾವರಣಗೊಳಿಸಿತ್ತು ಎಂದು ಹೇಳಿದ್ದಾರೆ.

ರಾಜಕಾರಣದಲ್ಲಿ ಅತ್ಯಂತ ಶಾಂತ ಸ್ವಭಾವದ, ಸಜ್ಜನ, ಕೃಷ್ಣ ಪರಿಶುಭ್ರತೆಗೆ ಮಾದರಿಯಾದವರು. ವಿಶ್ವಬಂಧು ಮರುಳಸಿದ್ಧ, ಬಸವಾದಿ ಶರಣರು, ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ ಹಾಗೂ ಅವರ ಕುಟುಂಬ ಮತ್ತು ಪ್ರೀತಿಪಾತ್ರರಿಗೆ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇವೆ ಎಂದು ಸಿರಿಗೆರೆ ಜಗದ್ಗುರುಗಳು ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

# ಕೃಷ್ಣ ನಿಧನಕ್ಕೆ ಎಸ್ಸೆಸ್ ಕುಟುಂಬ ತೀವ್ರ ಸಂತಾಪ



ದಾವಣಗೆರೆ, ಡಿ.10 -ನಾಡು ಕಂಡಿರುವ ಹಿರಿಯ ಮುಖ್ಯಮಂತ್ರಿಗಳಾದ ಎಸ್.ಎಂ ಕೃಷ್ಣ ಅವರ ನಿಧನಕ್ಕೆ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ಹಿರಿಯ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.

ಎಸ್.ಎಂ. ಕೃಷ್ಣ ಅವರು ರಾಜ್ಯದ ಜನತೆಯ ಹಿತ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಮುಖ್ಯಮಂತ್ರಿಯಾಗಿದ್ದ ವೇಳೆ ಯಶಸ್ವಿನಿ ಯೋಜನೆ, ಸ್ತ್ರೀ ಶಕ್ತಿ ಸಂಘಗಳ ಉಗಮ, ಮಕ್ಕಳಿಗೆ ಬಿಸಿಯೂಟದ ಅಕ್ಷರ ದಾಸೋಹ, ಬೆಂಗಳೂರಿನಲ್ಲಿ ಐಟಿ ಹಬ್, ಮೆಟ್ರೋ, ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಯಾದವು.

ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣೆಯಲ್ಲಿ ಗೆದ್ದು ಶಾಸಕರಾದ ನಂತರ ಕಾಂಗ್ರೆಸ್ ಪಕ್ಷವನ್ನು ಸೇರಿದ ಎಸ್.ಎಂ ಕೃಷ್ಣ ಅವರು ಬಳಿಕ ಸಚಿವರಾಗಿ, ಮುಖ್ಯಮಂತ್ರಿಯಾಗಿ, ರಾಜ್ಯಪಾ ಲರಾಗಿ ಹಾಗೂ ವಿದೇಶಾಂಗ ಸಚಿವ ರಾಗುವವರೆಗೂ ಬೆಳೆದರು. ಇವರು ಮುಖ್ಯಮಂತ್ರಿಗಳಾಗಿದ್ದ ಕಾಲದಲ್ಲಿ ಭೀಕರ ಬರಗಾಲ, ಕಾವೇರಿ ಹೋರಾಟ, ನಟ ರಾಜಕುಮಾರ್ ಅಪಹರಣಗಳಂತಹ ಸಾಕಷ್ಟು ಸಂಕಷ್ಟಗಳನ್ನು ಎದುರಿಸಿದರು. ಆದರೂ ಕೆಲವು ಅದ್ಭುತ ಯೋಜನೆಗಳನ್ನ ಜಾರಿಗೆ ತಂದು ರಾಜ್ಯದ ಅಭಿವೃದ್ಧಿಗೆ ಬುನಾದಿ ಹಾಕಿದರು ಎಸ್.ಎಂ ಕೃಷ್ಣಾ ಅವರು ಎಂದು ಸ್ಮರಿಸಿರುವರು.

ಶ್ರೀಯುತರ ಅಗಲಿಕೆಯಿಂದ ಕೋಟ್ಯಾಂತರ ಅಭಿಮಾನಿಗಳಿಗೆ ಮತ್ತು ಎಸ್.ಎಂ ಕೃಷ್ಣ ಅವರ ಒಡನಾಡಿಗಳಿಗೆ, ಆತ್ಮೀಯರಿಗೆ ಹಾಗೂ ಅವರ ಕುಟುಂಬಕ್ಕೆ ತುಂಬಲಾರದ ನಷ್ಟ ಸಂಭವಿಸಿದೆ. ಅವರ ಆತ್ಮಕ್ಕೆ ಭಗವಂತ ಶಾಂತಿಯನ್ನು ಕರುಣಿಸಿ ಅವರ ಕುಟುಂಬಸ್ಥರಿಗೆ ದುಃಖ ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಸಚಿವರು, ಸಂಸದರು, ಶಾಸಕರು ಹಾಗೂ ಗಣ್ಯರು ಸಂತಾಪ ಸೂಚಿಸಿದ್ದಾರೆ.

# ಕೃಷ್ಣ ಅಗಲಿಕೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ



ಶ್ರೀ ರಂಭಾಪುರಿ ಪೀಠ (ಬಾಳೆಹೊನ್ನೂರು) ಡಿ. 10 - ರಾಜ್ಯದ ಮುಖ್ಯ ಮಂತ್ರಿಯಾಗಿ, ಕೇಂದ್ರದ ವಿದೇಶಾಂಗ ಸಚಿವರಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ, ರಾಜ್ಯ ವಿಧಾನಸಭಾ ಸ್ಪೀಕರ್ ಆಗಿ ಸೇವೆ ಸಲ್ಲಿಸಿದ ಪದ್ಮಭೂಷಣ ಎಸ್.ಎಂ. ಕೃಷ್ಣ ಇವರ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

ಕೃಷ್ಣ ಅವರು ರಾಜ್ಯದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆಗಳನ್ನು ನೀಡಿರುವುದನ್ನು ಮರೆಯಲಾಗದು. ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಗುರು-ವಿರಕ್ತರ ಸಮಾವೇಶಕ್ಕೆ ಆಗಮಿಸಿ ಸಮಾರಂಭ ಉದ್ಘಾಟಿಸಿದ್ದು ತಮ್ಮ ಮನದಲ್ಲಿ ಹಸಿರಾಗಿದೆ. ನಂತರದ ದಿನಗಳಲ್ಲಿಯೂ ಸಹ ಅವರು ಶ್ರೀ ಪೀಠಕ್ಕೆ ಆಗಮಿಸಿ ಜಗದ್ಗುರುಗಳ ಆಶೀರ್ವಾದ ಪಡೆದು ಹೋಗಿದ್ದಾರೆ. ಹಲವಾರು ಸಮಾರಂಭಗಳಲ್ಲಿ ಅವರು ಭಾಗವಹಿಸಿದ್ದು ತಮ್ಮ ಮನದಲ್ಲಿ ಹಸಿರಾಗಿದೆ. ಅವರು ಮುತ್ಸದ್ದಿ ರಾಜಕಾರಣಿಯಾಗಿದ್ದರು. ಸರಳತೆ ಮತ್ತು ಸೌಜನ್ಯತೆಯ ನಡವಳಿಕೆ ಹೊಂದಿದ್ದ ಅವರ ಅಗಲಿಕೆ ತಮಗೆ ನೋವನ್ನುಂಟು ಮಾಡಿದೆ ಎಂದು ಜಗದ್ಗುರುಗಳು ತಮ್ಮ ಸಂತಾಪ ಸೂಚಕದಲ್ಲಿ ತಿಳಿಸಿದ್ದಾರೆ.

# ಕೃಷ್ಣ ನಿಧನಕ್ಕೆ ಶ್ರೀ ಬಸವಲಿಂಗ ಮಹಾಸ್ವಾಮಿಗಳ ಸಂತಾಪ



ಹರಿಹರ, ಡಿ. 10 - ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ಅಗಲಿಕೆಯಿಂದ ರಾಜ್ಯವು ಒಬ್ಬ ದಕ್ಷತೆ ಮತ್ತು ಮುತ್ಸದ್ಧಿ ರಾಜಕೀಯ ವ್ಯಕ್ತಿ ಯನ್ನು ಕಳೆದುಕೊಂಡಂತಾಗಿದೆ ಎಂದು ನಗರದ ನೂರ ಎಂಟು ಲಿಂಗೇಶ್ವರ ದೇವಸ್ಥಾನದ ಶರಣ ಶ್ರೀ ಬಸವಲಿಂಗ ಮಹಾಸ್ವಾಮೀಜಿ ಸೊಲ್ಲಾಪುರ ಹೇಳಿದರು.

ಕೃಷ್ಣ ತಮ್ಮ ಆರು ದಶಕಗಳ ರಾಜಕೀಯ ಜೀವನದಲ್ಲಿ ಎಲ್ಲರೊಡನೆ ಒಳ್ಳೆಯ ಒಡನಾಟ ಹೊಂದಿದ್ದರು. ಬಹಳ ಸರಳ ಸಜ್ಜನಿಕೆಯ ಮತ್ತು ಶಿಸ್ತು ಬದ್ಧ ವ್ಯಕ್ತಿಯಾಗಿದ್ದ ಅವರು ದೂರ ದೃಷ್ಟಿಯುಳ್ಳ ಸಮರ್ಥ ಆಡಳಿತಗಾರಾಗಿದ್ದರು. ಕಾವೇರಿ ಹಾಗೂ ಡಾ. ರಾಜಕುಮಾರ ರವರ ಸಮಸ್ಯೆಯನ್ನು ರಾಜ್ಯದ ಜನರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಬಗೆಹರಿಸುವಲ್ಲಿ ಬಹಳ ಜಾಣ್ಮೆಯ ಹೆಜ್ಜೆಗಳನ್ನು ಹಾಕಿದ್ದರು. ಅಂತ ಮಹಾನ್ ಚೇತನಕ್ಕೆ ಭಗವಂತನನು ಶಾಂತಿ ನೀಡಲಿ ಎಂದು ಹೇಳಿದರು.

## ನಗರದಲ್ಲಿ ಇಂದು ಗೀತಾ ಜಯಂತಿ

ಎಸ್. ನಿಜಲಿಂಗಪ್ಪ ಬಡಾವಣೆ ವರ್ತುಲ ರಸ್ತೆಯಲ್ಲಿರುವ ಶ್ರೀ ಶಾರದಾಂಬ ದೇವಸ್ಥಾನದಲ್ಲಿ ಇಂದು ಗೀತಾ ಜಯಂತಿ ಕಾರ್ಯಕ್ರಮವನ್ನು ಬ್ರಾಹ್ಮಣ ಸಮಾಜ ಸೇವಾ ಸಂಘದ ಮಹಿಳಾ ವಿಭಾಗದಿಂದ ಹಮ್ಮಿಕೊಳ್ಳಲಾಗಿದೆ. ಸದ್ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಬ್ರಾಹ್ಮಣ ಸಮಾಜ ಸೇವಾ ಸಂಘದ ಕಾರ್ಯದರ್ಶಿ ಶ್ರೀಮತಿ ಅಡಿಗ ಕೋರಿದ್ದಾರೆ.

# ನಾಳೆ ಅಂಗನವಾಡಿ ಕಾರ್ಯಕರ್ತೆಯರ, ಸಹಾಯಕಿಯರ ಬೆಳಗಾವಿ ಚಲೋ

ದಾವಣಗೆರೆ, ಡಿ. 10- ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ, ಸಹಾಯಕಿಯರ ಫೆಡರೇಶನ್ ವತಿಯಿಂದ ನಾಡಿದ್ದು ದಿನಾಂಕ 12 ರ ಗುರುವಾರ ಬೆಳಗಾವಿ ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಫೆಡರೇಷನ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್.ಎಸ್. ಮಲ್ಲಮ್ಮ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆಯರಿಗೆ 15 ಸಾವಿರ, ಸಹಾಯಕರಿಯರಿಗೆ 10 ಸಾವಿರ ಗೌರವ ಧನ ಹೆಚ್ಚಿಸುವುದು, ನಿವೃತ್ತಿ ಯಾದವರಿಗೆ ಮೂರು ಲಕ್ಷ ಇಡಿಗಂಡು ನೀಡುವ ಆರನೇ ಗ್ಯಾರಂಟಿ ಜಾರಿಗೊಳಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಗ್ರ್ಯಾಚುಟಿ ಪಡೆಯಲು ಅರ್ಹರು ಎಂಬ ಸುಪ್ರೀಂ ಕೋರ್ಟ್ ತೀರ್ಪು ಜಾರಿಗೊಳಿಸಬೇಕು ಎಂದರು.

ಹಿಂದಿನ ಸರ್ಕಾರ ದಿನಾಂಕ 1-4-2023 ರಿಂದ ನಿವೃತ್ತಿಯಾದವರಿಗೆ ಗ್ರಾಚ್ಯುಟಿ ನೀಡಬೇಕೆಂದು ಆದೇಶ ನೀಡಿದೆ. ಅದನ್ನು ಮಾರ್ಪಡಿಸಿ ನಿವೃತ್ತರಾದ ಎಲ್ಲರಿಗೂ ಅನ್ವಯವಾಗುವಂತೆ ಆದೇಶಿಸಬೇಕು. ಅನಾರೋಗ್ಯ ಪೀಡಿತರಾಗಿರುವವರಿಗೆ ಪರಿಹಾರ ಧನ ಮೂರು ಲಕ್ಷ ನೀಡಿ ಸ್ವಯಂ ನಿವೃತ್ತಿಗೆ ಅವಕಾಶ ಕಲ್ಪಿಸು ವಂತೆ, ಹಿಂದಿನ ಬಜೆಟ್‌ನಲ್ಲಿ ಘೋಷಿಸಿರುವಂತೆ ಜಾರಿ ಮಾಡಬೇಕು. ಮಿನಿ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಸಹಾಯಕಿಯರನ್ನು ನೇಮಿಸಬೇಕು ಹಾಗೂ ಗೌರವಧನ ಹೆಚ್ಚಿಸಬೇಕು. ಅಂಗನವಾಡಿ ಕಾರ್ಯಕರ್ತೆಯರನ್ನು ಬಿ.ಎಲ್.ಓ. ಜವಾಬ್ದಾರಿಯಿಂದ ಬಿಡುಗಡೆಗೊಳಿಸಬೇಕು, ಎನ್.ಕೆ. ಪಾಟೀಲ್ ಅವರ ವರದಿಯನ್ನು ಜಾರಿ ಮಾಡಿ ಯೋಜನೇತರ ಸರ್ವೇ ಕೆಲಸಗಳಿಂದ ಕೈಬಿಡಬೇಕು ಎಂದು ಅವರು ಒತ್ತಾಯಿಸಿದರು.

ಫೆಡರೇಶನ್ ಪದಾಧಿಕಾರಿಗಲಾದ ವಿಜಯ ಕುಮಾರಿ, ಕೆ.ಸಿ. ನಿರ್ಮಲ್, ಕುಸುಮ, ಹೆಚ್.ಜಿ. ಮಂಜುಳ, ರೂಪ ಮತ್ತಿತರರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಓದುಗರ ಪತ್ರ



### ಸೀಟ್ ಆಟೋಗಳು ಎಷ್ಟು ಸುರಕ್ಷಿತ?

ಮಾನ್ಯರೇ,

ದಾವಣಗೆರೆ ನಗರದಲ್ಲಿ ಒಂದಿಷ್ಟು ಸೀಟು ಆಟೋಗಳ ಸಂಖ್ಯೆ ಹೆಚ್ಚಿವೆ. ಆ ಆಟೋದಲ್ಲಿ ಗರಿಷ್ಠ ಎಷ್ಟು ಪ್ರಯಾಣಿಕರು ಇರಬಹುದು? ಎಂಬುದು ಹಲವರ ಪ್ರಶ್ನೆ ಆಗಿದೆ. ಎಡ ಬಲಕ್ಕೆ ತಿರುವು ತೆಗೆದುಕೊಳ್ಳುವ ಆಟೋ ಚಾಲಕರನ್ನು ಕಂಡಾಗ ಒಳಗೆ ಕುಳಿತಿರುವ ಪ್ರಯಾಣಿಕರು ಎಷ್ಟರ ಮಟ್ಟಿಗೆ ಸುರಕ್ಷಿತ? ಎಂಬ ಪ್ರಶ್ನೆಯೂ ಮೂಡುತ್ತದೆ.

ಎಲ್ಲರಿಗೂ ದುಡಿಮೆ ಮಾಡುವ, ಬದುಕುವ ಹಕ್ಕು ಇದೆ. ಆದರೆ ಸೀಟ್ ಆಟೋದಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸುರಕ್ಷೆ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಏನು ಕ್ರಮವಹಿಸಿದ್ದಾರೆ ಎಂಬುದು ತಿಳಿಯುತ್ತಿಲ್ಲ. ಭರ್ತಿಯಾಗಿರುವ ಸೀಟ್ ಆಟೋಗಳಲ್ಲಿ ಪ್ರಯಾಣಿಕರು ಹೊರ ಬೀಳದ ಹಾಗೇ ಸುರಕ್ಷಿತ ಬಾಗಿಲುಗಳು ಕಾಣಸಿಗುವುದಿಲ್ಲ. ಅನಾಹುತಗಳು ಆಗುವ ಮುಂಚೆಯೇ ಪ್ರಾದೇಶಿಕ ಸಾರಿಗೆ ಕಚೇರಿಯವರು ಈ ವಿಚಾರವಾಗಿ ಗಮನವಹಿಸಲಿ.

- **ವೈ. ವಾದಿರಾಜ ಭಟ್**, ವಕೀಲರು, ದಾವಣಗೆರೆ.

## ತರಳಬಾಳು ಸಂಸ್ಥೆ ಸಂದರ್ಶನ ಮುಂದೂಡಿಕೆ

ಸಿರಿಗೆರೆ, ಡಿ.10- ಸಿರಿಗೆರೆಯ ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆ ಯ ಅನುದಾನಿತ ಪ್ರೌಢಶಾಲೆಗಳಿಗೆ ಆಂಗ್ಲಭಾಷಾ ಶಿಕ್ಷಕರನ್ನು ಆಯ್ಕೆ ಮಾಡಲು ಮಾಕನೂರು ಮಲ್ಲೇಶಪ್ಪ ಶಿಕ್ಷಣ ಮಹಾವಿದ್ಯಾಲಯದಲ್ಲಿ ಇಂದು ನಡೆಯಬೇಕಿದ್ದ ಸಂದರ್ಶನವು ಇದೇ ದಿನಾಂಕ 18 ರಂದು ನಡೆಸಲಾಗುವುದು ಎಂದು ಸಂಸ್ಥೆಯ ಆಡಳಿತಾಧಿಕಾರಿ ಡಾ. ಹೆಚ್.ವಿ. ವಾಮದೇವಪ್ಪ ತಿಳಿಸಿದ್ದಾರೆ.

## ಚೌಡಯ್ಯದಾನಾಪುರ ವೀರಭದ್ರೇಶ್ವರ ಕಾರ್ತಿಕೋತ್ಸವ

ರಾಣೇಬೆನ್ನೂರು, ಡಿ.10- ತಾಲ್ಲೂಕಿನ ಚೌಡಯ್ಯ ದಾನಾಪುರದಲ್ಲಿ ನಾಡಿದ್ದು ದಿನಾಂಕ 12ರ ರಾತ್ರಿ 8ಕ್ಕೆ ಶ್ರೀ ವೀರಭದ್ರೇಶ್ವರ ದೇವರ ಕಾರ್ತಿಕೋತ್ಸವವು ಚೌಡಯ್ಯದಾನಾಪುರ ಸಂಸ್ಥಾನ ಮಠದ ಚಿತ್ರಶೇಖರ ಒಡೆಯರ ಶಿವಾಚಾರ್ಯ ಶ್ರೀಗಳ ಸಾನ್ನಿಧ್ಯದಲ್ಲಿ ಜರುಗಲಿದೆ.

# ಅದಾನಿ ಕುರಿತು ಚರ್ಚಿಸಲು ಅವಕಾಶ ನಿರಾಕರಣೆ ; ಸಂಸದೆ ಪ್ರಭಾ ಆರೋಪ

ದಾವಣಗೆರೆ, ಡಿ. 10 - ಸಂಸತ್ ಭವನದಲ್ಲಿ ಕಲಾಪ ನಡೆಯುವ ವೇಳೆ ಉದ್ಯಮಿ ಅದಾನಿ ಕುರಿತು ಚರ್ಚೆ ಮಾಡಲು ಹಾಗೂ ಪ್ರತಿ ಪಕ್ಷಗಳಿಗೆ ಈ ಕುರಿತು ಮಾತನಾಡಲು ಆಡಳಿತ ಪಕ್ಷ ಅವಕಾಶ ಕಲ್ಪಿಸುತ್ತಿಲ್ಲ ಇದು ಖಂಡನೀಯ ಎಂದು ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಆರೋಪಿಸಿದ್ದಾರೆ.

ನವದೆಹಲಿಯ ಸಂಸತ್ ಸದನದಲ್ಲಿ ಕಲಾಪ ಪ್ರಾರಂಭವಾದಾಗಿನಿಂದಲೂ ಕಾಂಗ್ರೆಸ್‌ನ ಸಂಸದರು ಅದಾನಿ ಕುರಿತು ಮಾತನಾಡಲು ಅವಕಾಶ ಕೇಳಿದಾಗ ಪ್ರತಿ ಬಾರಿಯೂ ನಿರಾಕರಿಸುವ ಮೂಲಕ ಸ್ವಾತಂತ್ರ್ಯ ಹರಣ ಮಾಡಲಾಗುತ್ತಿದೆ. ನೆಪ ಹೇಳುವ ಮೂಲಕ ಕಾಂಗ್ರೆಸ್ ಸಂಸದರನ್ನು ಹತ್ತಿಕ್ಕಲಾಗುತ್ತಿದೆ ಎಂದಿದ್ದಾರೆ.

ಆಡಳಿತ ಪಕ್ಷದ ಕಾರ್ಯ ವೈಖರಿ ಖಂಡಿಸಿ ಕಾಂಗ್ರೆಸ್ ಮೈತ್ರಿಕೂಟದ ಸಂಸದರು ಪ್ರತಿನಿತ್ಯ ಸಂಸತ್ತಿನ ಹೊರ ಭಾಗದಲ್ಲಿ ಪ್ರತಿಭಟನೆ ನಡೆಸುತ್ತಿದ್ದೇವೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ನೇತೃತ್ವದಲ್ಲಿ ಮೋದಿ ಅದಾನಿ ಏಕ್ ಹೈ ಎಂದು ಆರೋಪಿಸಿ ಪ್ರತಿಭಟನೆ ಮಾಡಲಾಗಿದೆ. ವಿಶೇಷ ರೀತಿಯಲ್ಲಿ ಮೋದಿ ಹಾಗೂ ಅದಾನಿ ಮಾಸ್ಕ್ ಧರಿಸಿ ಹಾಗೂ ಕಪ್ಪು ಪಟ್ಟಿ ಧರಿಸಿ ವಿನೂತನ ರೀತಿಯಲ್ಲಿ ಪ್ರತಿಭಟನೆ ಮಾಡಲಾಗುತ್ತಿದೆ. ಆದರೂ ಸಂಸತ್‌ನಲ್ಲಿ ಅದಾನಿ ಬಗ್ಗೆ ಮಾತನಾಡಲು ಆಡಳಿತ ಪಕ್ಷ ನಮಗೆ ಅವಕಾಶ ಕಲ್ಪಿಸದಿರುವುದು ದುರಂತ ಎಂದರು.

ಸಂಸತ್ತಿನ ಒಳಗೆ ಮಾತನಾಡಲು ಅವಕಾಶ ಕಲ್ಪಿಸದ ಕಾರಣ ಹೊರಭಾಗದಲ್ಲಿ ಪ್ರತಿಭಟನೆ ನಡೆಸಿದರೆ, ಕಾಂಗ್ರೆಸ್ ನವರು ಕಲಾಪಕ್ಕೆ ಅಡ್ಡಿ ಮಾಡುತ್ತಿದ್ದಾರೆ ಎಂದು ಬಿಜೆಪಿಯವರು ಆರೋಪ ಮಾಡುತ್ತಿದ್ದಾರೆಂದು ಪ್ರಭಾ ಮಲ್ಲಿಕಾರ್ಜುನ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಯುವಜನೋತ್ಸವ : ಆಯ್ಕೆ ಪ್ರಕ್ರಿಯೆ ಮುಂದಕ್ಕೆ

ದಾವಣಗೆರೆ, ಡಿ.10 - ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆಯ ಕಾರ್ಯಕ್ರಮವನ್ನು ಇದೇ ದಿನಾಂಕ 14 ಕ್ಕೆ ಮುಂದೂಡಲಾಗಿದೆ ಎಂದು ಇಲಾಖೆ ಸಹಾಯಕ ನಿರ್ದೇಶಕರಾದ ರೇಣುಕಾದೇವಿ ತಿಳಿಸಿದ್ದಾರೆ.

# ಬಾತಿ ಕೆರೆ ಏರಿ ನಿರ್ಮಾಣ, ಪಿಜಿಂಗ್ ಕಾಮಗಾರಿ

## ನಗರ ಪಾಲಿಕೆ ಸ್ಥಾಯಿ ಸಮಿತಿ ಅಧ್ಯಕ್ಷೆ ಸವಿತಾ ಗಣೇಶ್ ಹುಲ್ಲುಮನಿ ಪರಿಶೀಲನೆ



ದಾವಣಗೆರೆ, ಡಿ. 10 - ಮಹಾನಗರ ಪಾಲಿಕೆ ವ್ಯಾಪ್ತಿಯ ಕುಂದುವಾಡ ಸರ್ವೇ ನಂಬರ್ 169 ರಿಂದ ಕುಂದವಾಡ ಎಸ್‌ಟಿಪಿ ವರೆಗಿನ ಬಾತಿ ಕೆರೆ ಮಣ್ಣಿನ ಏರಿ ನಿರ್ಮಾಣ ಮತ್ತು ಪಿಜಿಂಗ್ ಕಾಮಗಾರಿಯನ್ನು ಶ್ರೀಮತಿ ಸವಿತಾ ಗಣೇಶ್ ಹುಲ್ಲುಮನಿ, ಅಧ್ಯಕ್ಷರು ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ, ಇವರು ಸ್ಥಳಕ್ಕೆ ಭೇಟಿ ನೀಡಿ ಸದರಿ ಕಾಮಗಾರಿಯು ಬಾತಿ ಕೆರೆಗೆ ಸೇರುತ್ತಿರುವ ಕಲುಷಿತ ನೀರನ್ನು ತಡೆಯುವುದು ಹಾಗೂ ಎನ್‌ಜಿಟಿ (ನ್ಯಾಷನಲ್ ಗ್ರೀನ್ ಟ್ರಿಬ್ಯೂನಲ್) ರವರ ಮಾರ್ಗ ಸೂಚಿಯಂತೆ ಕೆರೆ ನಿರ್ವಹಣೆ ಮಾಡಿದಂತಾಗುತ್ತದೆ ಹಾಗೂ ಮುಂಬರುವ ದಿನಗಳಲ್ಲಿ ಶುದ್ಧೀಕರಿಸಿದ ನೀರನ್ನು ಕೃಷಿ ಚಟುವಟಿಕೆಗೆ ಬಳಸಲು ಯೋಜನೆ ರೂಪಿಸಲಾಗಿರುತ್ತದೆ.

ಕಾರಣ ಕಾಲಾವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಲು ಸೂಕ್ತ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು ಹಾಗೂ ಕಾಮಗಾರಿಯನ್ನು ಪರಿಶೀಲಿಸಿ ಗುಣಮಟ್ಟ ಕಾಪಾಡುವ ಜೊತೆಗೆ ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

## ಫೋಟೋಗ್ರಾಫಿ - ವಿಡಿಯೋಗ್ರಾಫಿ ತರಬೇತಿಗೆ ಅರ್ಜಿ ಆಹ್ವಾನ

ದಾವಣಗೆರೆ, ಡಿ. 10 -ಡ್ರೋನ್ ಆಧಾರಿತ ಫೋಟೋಗ್ರಾಫಿ ಮತ್ತು ವಿಡಿಯೋಗ್ರಾಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಇಚ್ಛಿಸುವ ಪರಿಶಿಷ್ಟ ಪಂಗಡದ ಯುವಕ, ಯುವತಿಯರಿಗೆ ತರಬೇತಿ ನೀಡಲು ಅರ್ಜಿ ಅಹ್ವಾನಿಸಲಾಗಿದೆ. ತರಬೇತಿ ಪಡೆಯಲು ಇಚ್ಛಿಸುವರು ಅರ್ಜಿ ನಮೂನೆಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ದಾವಣಗೆರೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ದಾವಣಗೆರೆ, ಜಗಳೂರು, ಚನ್ನಗಿರಿ ತಾಲ್ಲೂಕು ಹಾಗೂ ಸಹಾಯಕ ನಿರ್ದೇಶಕರು, (ಗ್ರೇಡ್-2), ಸಮಾಜ ಕಲ್ಯಾಣ ಇಲಾಖೆ, ಹರಿಹರ ಮತ್ತು ಹೊನ್ನಾಳಿ ಕಚೇರಿಯಲ್ಲಿ ಪಡೆದು, ನಾಳೆ ದಿನಾಂಕ 11 ರೊಳಗಾಗಿ ಸಲ್ಲಿಸಬೇಕು.


ಡಾ. ಶುಕ್ಲಶೆಟ್ಟಿ ಸಿಟಿ ಕ್ಲಿನಿಕ್ ಸ್ಥಳ ಬದಲಾವಣೆ

ಬಿನ್ನಿಕಂಪನಿ ರಸ್ತೆ, ಮಂಡಿಪೇಟೆಯಲ್ಲಿದ್ದ ಸಿಟಿ ಕ್ಲಿನಿಕ್‌ನ್ನು
(ಡಾ.ಶುಕ್ಲ ಎಸ್.ಶೆಟ್ಟಿ ಸ್ತ್ರೀ ರೋಗ ಮತ್ತು ಸುಸ್ರೂತಿ ತಜ್ಞರು)
ದಿನಾಂಕ 12.12.2024ರ ಗುರುವಾರದಿಂದ 2ನೇ ಮುಖ್ಯ ರಸ್ತೆ,
(ಡಾ. ಎಸ್.ಎಂ. ಎಲಿಯವರ ಮನೆ ಮತ್ತು ಕ್ಲಿನಿಕ್ ರಸ್ತೆ)
ಎಂ.ಸಿ.ಸಿ. 'ಬಿ' ಬ್ಲಾಕ್‌ಗೆ ಸ್ಥಳಾಂತರಿಸಲಾಗಿದೆ.
ಸಂಪರ್ಕಿಸಿ. ಮೊ. 08192 296361

NEW YEAR
Celebration at
MOTHI International HOLIDAYS
9449984859
BAKU
AZERBAIJAN
Departure 29 Dec 24
Cost Rs 110000

ಹುಟ್ಟುಹಬ್ಬದ ಶುಭಾಶಯಗಳು

ಹರಿಹರ ವಿಧಾನಸಭಾ ಕ್ಷೇತ್ರದ ಜನಪ್ರಿಯ ಮಾಜಿ ಶಾಸಕರೂ,
ಜೆಡಿಎಸ್‌ನ ಹಿರಿಯ ಮುಖಂಡರೂ, ಯುವ ನಾಯಕರೂ ಆದ
ಶ್ರೀ ಹೆಚ್.ಎಸ್. ಶಿವಶಂಕರ್
ಅವರಿಗೆ ಜನ್ಮ ದಿನದ ಹಾರ್ದಿಕ ಶುಭಾಶಯಗಳು.



ಮಾಲಾ ನಾಗರಾಜ್, ರಾಜ್ಯಾಧ್ಯಕ್ಷರು ಮಹಿಳಾ ಘಟಕ
ನಲ್ಲೂರು ವೇಣುಗೋಪಾಲ್, ಜಿಲ್ಲಾ ಗೌರವಾಧ್ಯಕ್ಷರು
ನಲ್ಲೂರು ವಾಸಂತಿ ಎಂ ಶೇಟ್, ಮಾಲೀಕರು, ಗಣೇಶ ಜ್ಯೂಯಲರಿ ಮಾರ್ಟ್

ಸಮಗ್ರ ಕರ್ನಾಟಕ ರಕ್ಷಣಾ ವೇದಿಕೆ (ರಿ.), ದಾವಣಗೆರೆ
ನಲ್ಲೂರು ಗಣೇಶ ಜ್ಯೂಯಲರಿ ಮಾರ್ಟ್
# 703, ಮಂಡಿಪೇಟೆ ಮುಖ್ಯ ರಸ್ತೆ, ದಾವಣಗೆರೆ. ಮೊ : 7019770195

# ಸಿಟಿ ಬ್ಯಾಂಕ್ ಅಧ್ಯಕ್ಷರಾಗಿ ಕೆ.ಎಸ್. ಮಹೇಶ್ವರಪ್ಪ



ದಾವಣಗೆರೆ, ಡಿ.10- ನಗರದ ಸಿಟಿ ಕೋ-ಆಪರೇಟಿವ್ ಬ್ಯಾಂಕಿನ ಅಧ್ಯಕ್ಷರಾಗಿ ಬ್ಯಾಂಕಿನ ಹಿರಿಯ ನಿರ್ದೇಶಕ ಕೆ.ಎಸ್. ಮಹೇಶ್ವರಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬ್ಯಾಂಕಿನ ಅಧ್ಯಕ್ಷರಾಗಿದ್ದ ಎನ್.ಜಿ. ಗುರುಸಿದ್ದಯ್ಯ ಅವರ ನಿಧನದ ಹಿನ್ನೆಲೆಯಲ್ಲಿ ತೆರವಾದ ಸ್ಥಾನಕ್ಕೆ ಬ್ಯಾಂಕಿನ ಸಭಾಂಗಣದಲ್ಲಿ ಇಂದು ನಡೆದ ಚುನಾವಣೆಯಲ್ಲಿ ಈ ಆಯ್ಕೆ ನಡೆಯಿತು.

ಬ್ಯಾಂಕಿನ ಉಪಾಧ್ಯಕ್ಷ ಎನ್.ಎಂ. ನಿರಂಜನ್ ನಿಶಾನಿಮಠ ಅವರು ಮಹೇಶ್ವರಪ್ಪ ಅವರ ಹೆಸರನ್ನು ಸೂಚಿಸಿದಾಗ, ನಿರ್ದೇಶಕ ಎನ್.ವಿ. ಬಂಡಿವಾಡ ಅವರು ಅನುಮೋದಿಸಿದರು.

ನಿರ್ದೇಶಕರುಗಳಾದ ಬಿ.ಹೆಚ್. ಪರಶುರಾಮಪ್ಪ, ಶ್ರೀಮತಿ ಎನ್.ಎಂ. ಪಂಕಜ ವೀರಯ್ಯ, ವಿಕಾಸ್ ಕುಮಾರ್, ಕೆ.ಆರ್. ರವೀಂದ್ರನಾಥ್, ಶ್ರೀಮತಿ ಆರ್. ಕೌಶಲ್ಯ, ಹೆಚ್.ವಿ. ವಿರೂಪಾಕ್ಷ, ಬಿ.ಜೆ. ಅಭಿಷೇಕ್, ಶ್ರೀಮತಿ ಲತಾ ಹಾಲೇಶ್, ಡಾ. ಎಂ. ಸೋಮಶೇಖರಪ್ಪ, ಎಂ.ಎಸ್. ಸುಮಂತ್ ಅವರುಗಳು ಸಭೆಯಲ್ಲಿ ಭಾಗವಹಿಸಿದ್ದರು.

ಚುನಾವಣಾಧಿಕಾರಿಯಾಗಿದ್ದ ಸಹಕಾರ ಸಂಘಗಳ ಉಪ-ನಿಬಂಧಕರ ಕಛೇರಿಯ ಸಹಕಾರ ಅಭಿವೃದ್ಧಿ ಅಧಿಕಾರಿ ಹೆಚ್. ರಮೇಶ್ ಅವರು ಮಹೇಶ್ವರಪ್ಪ ಅವರ ಆಯ್ಕೆಯನ್ನು ಘೋಷಿಸಿದರು.

## ಕೃಷ್ಣ ನಿಧನಕ್ಕೆ ಸಿದ್ದೇಶ್ವರ ಸಂತಾಪ


ದಾವಣಗೆರೆ, ಡಿ.10- ದೇಶದ ರಾಜಕಾರಣದಲ್ಲಿ ಅಪ್ರತಿಮ ಸೇವೆ ಸಲ್ಲಿಸಿ, ಅಜಾತಶತ್ರು ಎನಿಸಿಕೊಂಡಿದ್ದ ಎಸ್.ಎಂ. ಕೃಷ್ಣ ಅವರ ಅಗಲಿಕೆಯು ರಾಜ್ಯಕ್ಕೂ ಹಾಗೂ ದೇಶಕ್ಕೂ ತುಂಬಲಾರದ ನಷ್ಟವಾಗಿದೆ ಎಂದು ಮಾಜಿ ಕೇಂದ್ರ ಸಚಿವ ಜಿ.ಎಂ. ಸಿದ್ದೇಶ್ವರ ಸಂತಾಪ ವ್ಯಕ್ತಪಡಿಸಿದ್ದಾರೆ.

## ಒಳಮೀಸಲಾತಿ : ನಗರದಲ್ಲಿ ಇಂದು ಮಾದಿಗ ಜನಾಂಗದ ಸಭೆ

ಒಳಮೀಸಲಾತಿ ಕುರಿತು ಮಾದಿಗ ಜನಾಂಗದ ಪ್ರಮುಖರ ಮತ್ತು ಮಾದಿಗ ಸಂಬಂಧಿತ ಸಂಘಟನೆಗಳ ಮುಖಂಡರ ಸಭೆಯನ್ನು ಇಂದು ಬೆಳಿಗ್ಗೆ 11 ಗಂಟೆಗೆ ಹಳೇ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದೆ.

ಸಮಾಜದ ಚಿಂತಕರು, ಮುಖಂಡರು, ವಿದ್ಯಾರ್ಥಿ ಮುಖಂಡರು, ನೌಕರರು ಸಭೆಯಲ್ಲಿ ಭಾಗವಹಿಸುವಂತೆ ಮಹಾನಗರಪಾಲಿಕೆ ಮಾಜಿ ಸದಸ್ಯ ಎಂ. ಹಾಲೇಶ್ ಅವರು ಪತ್ರಿಕಾ ಹೇಳಿಕೆಯಲ್ಲಿ ಕೋರಿದ್ದಾರೆ.








## ಎಸ್.ಎಂ. ಕೃಷ್ಣ ಅವರೊಂದಿಗೆ ಸಚಿವ ಎಸ್ಸೆಸ್ಸೆಂ



ದಾವಣಗೆರೆ, ಡಿ. 10- ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲೆಂದು ನಗರಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಅವರ ಸಂಪುಟದಲ್ಲಿ ಸಚಿವರಾಗಿದ್ದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಕಾರಲ್ಲಿ ತಾವೇ ಡ್ರೈವ್ ಮಾಡಿಕೊಂಡು ಕಾರ್ಯಕ್ರಮಕ್ಕೆ ಕರೆದುಕೊಂಡು ಹೋಗಿದ್ದರು. ಶಾಸಕ ಎಸ್ಸೆಸ್ ಅವರೂ ಚಿತ್ರದಲ್ಲಿದ್ದಾರೆ.

## ಜಿಲ್ಲಾ ಕ.ರಾ.ಸ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿಯಾಗಿ ಬಿ. ಪಾಲಾಕ್ಷಿ



ದಾವಣಗೆರೆ, ಡಿ,10 - ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಕಾರ್ಯದರ್ಶಿಯನ್ನಾಗಿ ಸೀತಮ್ಮ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಬಿ. ಪಾಲಾಕ್ಷಿ ಅವರನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ವೀರೇಶ್ ಎಸ್. ಒಡೆನಪುರ ಅವರು ತಿಳಿಸಿದ್ದಾರೆ.

## 13ರಂದು ಶ್ರೀ ಶಾರದಾಂಬ ದೇವಸ್ಥಾನದಲ್ಲಿ ಕಾರ್ತಿಕೋತ್ಸವ

ದಾವಣಗೆರೆ, ಡಿ. 10 - ನಗರದ ನಿಜಲಿಂಗಪ್ಪ ಬಡಾವಣೆಯಲ್ಲಿರುವ ಶ್ರೀ ಶಾರದಾಂಬ ದೇವಸ್ಥಾನದಲ್ಲಿ ಇದೇ ದಿನಾಂಕ 13 ರ ಶುಕ್ರವಾರ ಸಂಜೆ 7 ಗಂಟೆಯಿಂದ ಕಡೆ ಕಾರ್ತಿಕೋತ್ಸವ ನಡೆಯಲಿದೆ.

# ಸೂರ್ಯ ಘರ್ ಬಿಜಲಿ ಯೋಜನೆ ಸದುಪಯೋಗಕ್ಕೆ ಡಿಸಿ ಜಾಗೃತಿ



ದಾವಣಗೆರೆ, ಡಿ.10- ಸೋಲಾರ್ ರೂಫ್ ಟಾಪ್ ಅಳವಡಿಸುವ ಮೂಲಕ ಉಚಿತ ವಿದ್ಯುತ್ ಸೌಲಭ್ಯ ಪಡೆದುಕೊಳ್ಳಲು ಸರ್ಕಾರ 'ಪಿಎಂ ಸೂರ್ಯಘರ್ ಮುಫ್ತ್ ಬಿಜಲಿ' ಯೋಜನೆ ರೂಪಿಸಿದೆ. ಗ್ರಾಹಕರು ಯೋಜನೆಗೆ ನೋಂದಾಯಿಸಿಕೊಂಡು ಮನೆಯಲ್ಲಿ ಉಚಿತ ವಿದ್ಯುತ್ ಪಡೆದು ಖರ್ಚು ಕಡಿಮೆ ಮಾಡಿಕೊಳ್ಳಬಹುದೆಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಪಿಎಂ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆಯ ಕುರಿತಂತೆ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಯೋಜನೆ ಅಡಿಯಲ್ಲಿ ಸೌರ ಫಲಕಗಳನ್ನು ಸ್ಥಾಪಿಸಲು, ಮಾನದಂಡ ವೆಚ್ಚದ ಶೇ.60 ರಷ್ಟು ಸಹಾಯಧನ ರೂಪದಲ್ಲಿ ಒದಗಿಸಲಾಗುತ್ತದೆ. 1 ಕಿಲೋವ್ಯಾಟ್‌ಗೆ ರೂ.30 ಸಾವಿರ, 2 ಕಿಲೋವ್ಯಾಟ್‌ಗೆ ರೂ.60 ಸಾವಿರ ಮತ್ತು 3 ಕಿಲೋವ್ಯಾಟ್‌ಗೆ ರೂ.78 ಸಾವಿರ ಸಹಾಯಧನ ನೀಡಲಾಗುವುದು. ತಮಗೆ ಸಾಕಾಗುವಷ್ಟು ವಿದ್ಯುತ್ ಬಳಸಿದ ಮೇಲೆ ವಿದ್ಯುತ್ತನ್ನು ಬೆಸ್ಕಾಂಗೆ ಮಾರಾಟ ಮಾಡಲು ಅವಕಾಶ ಇದೆ.

ಈ ಯೋಜನೆಯ ಲಾಭ ಪಡೆಯಲು ಯಾವುದೇ ಆರ್ಥಿಕ ಮಿತಿ ಇರುವುದಿಲ್ಲ. ಎಲ್ಲಾ ವರ್ಗದ ಗ್ರಾಹಕರು ನೊಂದಣಿ ಮಾಡಿಕೊಳ್ಳಬಹುದಾಗಿದೆ. ತಮ್ಮ ಮನೆ ಆರ್‌ಸಿಸಿ ಹೊಂದಿ ಕನಿಷ್ಠ 10/10 ಸ್ಥಳಾವಕಾಶ ಇದ್ದಲ್ಲಿ ಆಧಾರ್ ಕಾರ್ಡ್, ವಿದ್ಯುತ್ ಬಿಲ್, ಫೋಟೋದೊಂದಿಗೆ pmsuryaghar.gov.in ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದು, ರೂ.1500 ನೋಂದಣಿ ಶುಲ್ಕವಿರುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ. ಸಿಇಓ ಸುರೇಶ್ ಬಿ.ಇಟ್ನಾಳ್, ಬೆಸ್ಕಾಂ ಇಇ ತಿಪ್ಪೇಸ್ವಾಮಿ ಎ.ಕೆ ಹಾಗೂ ವಿವಿಧ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಶ್ರೀಲಂಕಾ ಅಧ್ಯಕ್ಷ ಅನುರಾ ದಿಸ್ಸಾನಾಯಕೆ ಭಾರತಕ್ಕೆ ಭೇಟಿ

ಕೊಲಂಬೊ, ಡಿ.10- ಶ್ರೀಲಂಕಾ ಅಧ್ಯಕ್ಷ ಅನುರಾ ದಿಸ್ಸಾನಾಯಕೆ ಅವರು ಮುಂದಿನ ವಾರ ಭಾರತಕ್ಕೆ ಭೇಟಿ ನೀಡುತ್ತಿದ್ದು, ಅವರು ಅಧಿಕಾರಕ್ಕೆ ಬಂದ ನಂತರ ಕೈಗೊಳ್ಳುತ್ತಿರುವ ಮೊದಲ ಅಂತರರಾಷ್ಟ್ರೀಯ ಪ್ರವಾಸ ಇದಾಗಿದೆ.

ಅಧ್ಯಕ್ಷ ದಿಸ್ಸಾನಾಯಕೆ ಅವರು ಡಿಸೆಂಬರ್ 15 ರಿಂದ 17 ರವರೆಗೆ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು ಪ್ರಧಾನಿ ನರೇಂದ್ರ ಮೋದಿ ಮತ್ತು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ ಎಂದು ಸಂಪುಟದ ವಕ್ತಾರ ನಳಿಂದಾ ಜಯತಿಸ್ಸ ಅವರು ಮಂಗಳವಾರ ಹೇಳಿದ್ದಾರೆ.

ದಿಸ್ಸಾನಾಯಕ ಅವರ ಭೇಟಿಯಿಂದ ಭಾರತ ಮತ್ತು ಶ್ರೀಲಂಕಾ ನಡುವಿನ ಸಂಬಂಧ ಇನ್ನಷ್ಟು ಗಟ್ಟಿಗೊಳ್ಳಲಿದೆ ಎಂದು ಪರಿಗಣಿಸಲಾಗಿದೆ.










KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas